ನಮ್ಮ ಜನ
NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 124 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 02–12–2024 ಸೋಮವಾರ | ಪುಟ: 4 | ಬೆಲೆ : ರೂ.2–00
Volume - 02 Issue - 124 | RNI No: KARKAN/2023/88462 | Chitradurga | Date: 02-12-2024 Monday | Page: 4 | Price: Rs. 2-00

ಒಳಪುಟದ ಸುದ್ದಿಗಳು
ಡಿ.20ರಂದು ಗ್ರಾಪಂ ನೌಕರರ ಚಳುವಳಿಗೆ ಕರೆ 2
ಕನ್ನಡವನ್ನು ಉಳಿಸಿಬೆಳೆಸುವ ಸಂಕಲ್ಪ ನಮ್ಮದಾಗಬೇಕು: ಶಾಸಕ ರಘುಮೂರ್ತಿ 3
ಭೌತಿಕ, ಬೌದ್ಧಿಕ ಕಸರತ್ತಿನ ಮೂಲಕ ಅನೇಕ ಕ್ರೀಡೆಗಳು ನಡೆಯುತ್ತವೆ: ಸ್ವಾಮೀಜಿ 4

ಸುದ್ದಿ, ಜಾಹಿರಾತಿಗೆ 9686622252

## ಫಾಸ್ಟ್ ನ್ಯೂಸ್

### 6 ರಂದು ಜಿಲ್ಲಾ ಮಟ್ಟದ ಯುವಜನೋತ್ಸವ

» ಚಿತ್ರದುರ್ಗ

ಡಿ.6 ರಂದು ಜಿಲ್ಲಾ ಮಟ್ಟದ ಯುವಜನೋತ್ಸವ ಕಾರ್ಯಕ್ರಮ ಆಯೋಜಿಸಲಾಗಿದೆ. ಈ ಹಿಂದೆ ಡಿ.7 ರಂದು ನಿಗದಿಯಾಗಿದ್ದ ಕಾರ್ಯಕ್ರಮವನ್ನು, ಅಂದು ಗ್ರಾಮಲೆಕ್ಕಾಧಿಕಾರಿ ಸ್ಪರ್ಧಾತ್ಮ ಪರೀಕ್ಷೆ ಇರುವ ಕಾರಣ ಡಿ.6 ರಂದು ನಡೆಸಲು ತೀರ್ಮಾನಿಸಲಾಗಿದೆ. ನಗರದ ಸರ್ಕಾರಿ ವಿಜ್ಞಾನ ಕಾಲೇಜಿನಲ್ಲಿ ಜಿಲ್ಲಾ ಮಟ್ಟದ ಯುವಜನೋತ್ಸವ ಸ್ಪರ್ದೆಗಳು ನಡೆಯಲಿವೆ. ಜಾನಪದ ಗೀತೆ, ನೃತ್ಯ, ಕಥೆ ಹಾಗೂ ಕವನ ಬರಹ, ಭಾಷಣ, ಚಿತ್ರಕಲೆ, ವಿಜ್ಞಾನ ಮೇಳ, ಮೊಬೈಲ್ ಫೋಟೋಗ್ರಫಿ ಹಾಗೂ ಉತ್ತಮ ಕರಕುಶಲ ವಸ್ತು ಪ್ರದರ್ಶನ, ಸಿದ್ದಉಡುಪು ಹಾಗೂ ಆಹಾರ ಸಂಸ್ಕರಣೆ ವಿಭಾಗಗಳಲ್ಲಿ ಸ್ಪರ್ಧೆಗಳು ಜರುಗಲಿವೆ. ಚಿತ್ರದುರ್ಗ ಜಿಲ್ಲೆಯವರು ಅಥವಾ ಜಿಲ್ಲೆಯಲ್ಲಿ ವ್ಯಾಸಾಂಗ ಮಾಡುತ್ತಿರುವ 15 ವರ್ಷ ಮೇಲ್ಪಟ್ಟ ಹಾಗೂ ಸೆಪ್ಟಂಬರ್ ಅಂತ್ಯಕ್ಕೆ 29 ವರ್ಷದ ಒಳಗಿರುವವರು ಸ್ಪರ್ಧೆಗಳಲ್ಲಿ ಭಾಗವಹಿಸಬಹದು. ಜಾನಪದ ಗೀತೆ ಹಾಗೂ ನೃತ್ಯ ವಿಭಾಗದಲ್ಲಿ ವೈಯಕ್ತಿಕ ಹಾಗೂ ಗುಂಪಾಗಿ ಸ್ಪರ್ಧಿಸಬಹುದು. ಚಿತ್ರಗೀತೆಗಳನ್ನು ಹಾಡಲು ಅವಕಾಶ ಇರುದಿಲ್ಲ. ಗುಂಪು ವಿಭಾಗದಲ್ಲಿ ಗರಿಷ್ಠ 10 ಜನರು ಭಾಗವಹಿಸಬಹುದು. ಪಂಚಪ್ರಾಣ ಎಂಬ ವಿಷಯದೊಂದಿಗೆ ಯುವಜನೋತ್ಸವ ಆಚರಿಸಲಾಗುತ್ತಿದ್ದು, ಕಥೆ, ಕವನ ಹಾಗೂ ಭಾಷಣ ಸ್ಪರ್ಧೆಗಳು ಈ ವಿಷಯವನ್ನು ಆಧಾರಿಸಿ ಸ್ಪರ್ದಿಸಬೇಕು. ಚಿತ್ರಕಲೆಯಲ್ಲಿ ಒಬ್ಬ ಸ್ಪರ್ಧಿಗೆ ಒಂದು ರಚನೆ ಮಾತ್ರ ಅವಕಾಶವಿರುತ್ತದೆ. ವಿಜ್ಞಾನ ಮೇಳದಲ್ಲಿ ಗುಂಪು ಹಾಗೂ ವೈಯಕ್ತಿಕವಾಗಿ ಭಾಗವಹಿಸಬಹುದು. ಮೊಬೈಲ್ ಪೋಟೋಗ್ರಫಿ, ಉತ್ತಮ ಕರಕುಶಲ ವಸ್ತು ಪ್ರದರ್ಶನ, ಸಿದ್ದಉಡುಪು ಹಾಗೂ ಆಹಾರ ಸಂಸ್ಕರಣೆ ವಿಭಾಗಗಳಲ್ಲಿ ಸೃಜನಶೀಲನೆ, ನಾವಿನ್ಯತೆ, ಕ್ರೀಯಾಶೀಲತೆ ಹಾಗೂ ತಾಂತ್ರಿಕ ಅಂಶಗಳಿಗೆ ಹೆಚ್ಚಿನ ಒತ್ತು ನೀಡಿ ವಿಜೇತರನ್ನು ಆಯ್ಕೆ ಮಾಡಲಾಗುವುದು. ಅಭ್ಯರ್ಥಿಗಳು, ವಾಸಸ್ಥಳ ದಢೀಕರಣ ಅಥವಾ ವಿದ್ಯಾಸಂಸ್ಥೆಗಳಿಂದ ಪಡೆದ ದೃಢೀಕರಣ ಪತ್ರಗಳೊಂದಗೆ ಸ್ಪರ್ದೆಗಳಲ್ಲಿ ಭಾಗಹಿಸಬೇಕು. ವಯಸ್ಸಿನ ದೃಢೀಕರಣಕ್ಕೆ ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಮುಖ್ಯೋಪಾಧ್ಯರ ದೃಢೀಕರಣಗಳ ಜೊತೆಗೆ ಮತದಾರ ಗುರುತಿನ ಚೀಟಿ, ಆಧಾರ್‌ಗಳನ್ನು ಪರಿಗಣಿಸಲಾಗುವುದು. ಪ್ರತಿ ಸ್ಪರ್ಧೆಯಲ್ಲಿ ಪ್ರಥಮ, ದ್ವಿತಿಯ ಹಾಗೂ ತೃತೀಯ ಸ್ಥಾನಗಳಲ್ಲಿ ವಿಜೇತರನ್ನು ಆಯ್ಕೆ ಮಾಡಲಾಗುವುದು. ನಗದು ಬಹುಮಾನೊಂದಿಗೆ ಪುರಸ್ಕಾರಮಾಡಲಾಗುವುದು.ಯುವಜನೋತ್ಸವಕ್ಕೆ ಆಗಮಿಸುವ ಸ್ಪರ್ಧಿಗಳಗಿಗೆ ಮಧ್ಯಾಹ್ನದ ಉಪಹಾರ ವ್ಯವಸ್ಥೆ ಇರಲಿದೆ. ಇದರೊಂದಿಗೆ ಜಿಲ್ಲೆಯ ವಿವಿಧ ಭಾಗಗಳಿಂದ ಆಗಮಿಸುವ ಸ್ಪರ್ಧಿಗಳಿಗೆ ಪ್ರಯಾಣದರ ಭತ್ಯೆ ನೀಡಲಾಗುವುದು. ಆಸಕ್ತರು MyBharatPortal ನಲ್ಲಿ ನೊಂದಾಯಿಸಿ ಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ಮೊಬೈಲ್ ಸಂಖ್ಯೆ 7760028435, 9945038684ಗೆ ಕರೆ ಮಾಡಬಹುದು.

### ಲೋಕ್ ಅದಾಲತ್

» ದಾವಣಗೆರೆ

ಡಿಸೆಂಬರ್ 14 ರಂದು ಬೆಳಿಗ್ಗೆ 10 ಗಂಟೆಗೆ ದಾವಣಗೆರೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿ ರಾಷ್ಟ್ರೀಯ ಲೋಕ್ ಅದಾಲತ್ ಆಯೋಜಿಸಲಾಗಿದೆ. ದಾವಣಗೆರೆ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದಲ್ಲಿ ಬಾಕಿಯಿರುವ ಪ್ರಕರಣಗಳಲ್ಲಿ ಸಂಧಾನದ ಮೂಲಕ ಇತ್ಯರ್ಥವಾಗುವಂತಹ ಪ್ರಕರಣಗಳನ್ನು ಲೋಕ್ ಅದಾಲತ್‌ಗೆ ಗುರುತಿಸಿಕೊಂಡಿರುವ ಪ್ರಕರಣಗಳನ್ನು ಗ್ರಾಹಕರು ಮತ್ತು ವಕೀಲರುಗಳು ಹಾಜರಾಗಿ ಹೆಚ್ಚಿನ ಸಂಖ್ಯೆಯಲ್ಲಿ ಪ್ರಕರಣಗಳನ್ನು ಇತ್ಯರ್ಥಪಡಿಸಬೇಕು ಎಂದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸಹಾಯಕ ರಿಜಿಸ್ಟಾರ್‌ತಿಳಿಸಿದ್ದಾರೆ.

### ಶಿಷ್ಯವೇತನಕ್ಕೆ ಅರ್ಜಿ

» ದಾವಣಗೆರೆ

ವಿಶ್ವವಿದ್ಯಾಲಯದಲ್ಲಿ ಪೋಸ್ಟ್ ಡಾಕ್ಟರಲ್ ಫೆಲೋಶಿಪ್ ಮಾಡುತ್ತಿರುವ ಪರಿಶಿಷ್ಟ ಪಂಗಡದ ಸಂಶೋಧನಾ ವಿದ್ಯಾರ್ಥಿಗಳಿಗೆ ಯಾವುದೇ ಫೆಲೋಶಿಪ್ ಪಡೆಯದಿದ್ದಲ್ಲಿ ಮಾಸಿಕ ರೂ.25,000/– ಗಳಂತೆ ಶಿಷ್ಯ ವೇತನ ಪಡೆಯಲು ಅರ್ಜಿ ಅಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಡಿಸೆಂಬರ್ 14 ಕೊನೆಯ ದಿನವಾಗಿರುತ್ತದೆ. ಆಯಾ ವಿವಿ ವ್ಯಾಪ್ತಿಯಲ್ಲಿ ಅರ್ಹ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಅರ್ಜಿ ನಮೂನೆಯನ್ನು ಜಿಲ್ಲಾ, ತಾಲ್ಲೂಕು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ ಕಚೇರಿಯಲ್ಲಿ ಪಡೆಯಬಹುದೆಂದು ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿ ತಿಳಿಸಿದ್ದಾರೆ.

# ಸರ್ಕಾರಿ ಶಾಲಾ ಕಾಲೇಜುಗಳ ಅಭಿವೃದ್ಧಿ ನನ್ನ ಮೊದಲ ಆದ್ಯತೆ: ಟಿ.ರಘುಮೂರ್ತಿ





» ನಮ್ಮಜನ ಸಮಾಚಾರ

ಚಿತ್ರದುರ್ಗ:ನನ್ನ ಕ್ಷೇತ್ರದಲ್ಲಿ ಶಾಲಾ ಕಾಲೇಜುಗಳ ಅಭಿವೃದ್ಧಿಗೆ ಸುಮಾರು 35 ಕೋಟಿಗೂ ಹೆಚ್ಚಿನ ಅನುದಾನದಲ್ಲಿ ನೀಡಿದ್ದು 150 ಕ್ಕೂ ಹೆಚ್ಚು ನೂತನ ಕೊಠಡಿಗಳನ್ನು ನಿರ್ಮಾಣ ಮಾಡಲಾಗುತ್ತಿದೆ ಎಂದು

ಸಣ್ಣ ಕೈಗಾರಿಕೆ ನಿಗಮದ ಅಧ್ಯಕ್ಷ ಹಾಗೂ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಹೇಳಿದರು.

ಚಿತ್ರದುರ್ಗ ತಾಲೂಕಿನ ತುರುವನೂರು ಹೋಬಳಿಯಲ್ಲಿ ಮುದ್ದಾಪುರ ಗ್ರಾಮದಲ್ಲಿ ಶನಿವಾರದಂದು ಆರ್.ಐ.ಡಿ.ಎಫ್. ನಬಾರ್ಡ್ ಯೋಜನೆಯಡಿ ಮುದ್ದಾಪುರ ಗ್ರಾಮದಲ್ಲಿ ನೂತನವಾಗಿ ನಿರ್ಮಾಣವಾಗಿದ್ದ 6 ಶಾಲಾ ಕೊಠಡಿಗಳ ಉದ್ಘಾಟನೆ ಮತ್ತು ವಿವಿಧ ಕಾರ್ಯಕ್ರಮಗಳ ಭೂಮಿ ಪೂಜೆ ನೆರವೇರಿಸಿ ಮಾತನಾಡಿದರು.

ಗ್ರಾಮೀಣ ಭಾಗದಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಕಟ್ಟಡಗಳ ನಿರ್ಮಾಣಕ್ಕೆ ಶಾಸಕರ ಅನುದಾನ, ಡಿಎಂಎಫ್, ನಬರ್ಡ್, ಸಿಎಂ ವಿಶೇಷ ಅನುದಾನ, ರಾಜ್ಯ ವಲಯ ಸೇರಿ ಸುಮಾರು 35 ಕೋಟಿ ವೆಚ್ಚದಲ್ಲಿ ಅತ್ಯಗತ್ಯವಾಗಿರುವ ಕಡೆ ನೂತನ ಕಟ್ಟಡಗಳನ್ನು ಇಡೀ ಚಳ್ಳಕೆರೆ ಕ್ಷೇತ್ರದಲ್ಲಿ ನಿರ್ಮಾಣವನ್ನು ಮಾಡಲಾಗುತ್ತಿದೆ.

ನನಗೆ ಬರುವಂತಹ ಶಾಸಕರ ಅನುದಾನದಲ್ಲಿ ಮೊದಲ ಆದ್ಯತೆ ಶಾಲೆಗಳ ಮಾಲಭೂತ ಸೌಲಭ್ಯಕ್ಕೆ ನೀಡುತ್ತಿದ್ದೇನೆ. ಚಳ್ಳಕೆರೆ ನಗರದಲ್ಲಿ ಬಿಎಂಹೆಚ್ ಎಸ್ 6 ಕೊಠಡಿ, ಮತ್ತು ಹೆಗ್ಗೆರೆ ತಾಯಮ್ಮ ಶಾಲೆ 6 ಕೊಠಡಿ, ಕ್ಷೇತ್ರ ಮಾದರಿ ಬಾಲಕರ ಶಾಲೆ 6 ಕೊಠಡಿ, ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ 6 ಕೊಠಡಿ ಸೇರಿ 24 ನೂತನ ಕಟ್ಟಡಗಳನ್ನು ನಿರ್ಮಾಣ ಮಾಡಿ ಈಗಾಗಲೇ ಲೋಕಾರ್ಪಣೆ ಮಾಡಲಾಗಿದೆ ಎಂದರು. ತುರುವನೂರು ಹೋಬಳಿಯ ತುರುವನೂರು ಗ್ರಾಮದಲ್ಲಿ ಐದು ಕೋಟಿ ವೆಚ್ಚದಲ್ಲಿ ಪದವಿ ಕಾಲೇಜು ನಿರ್ಮಾಣ ಮಾಡಿದ್ದು ಉದ್ಘಾಟನೆ ಹಂತದಲ್ಲಿದೆ. ಚಿಕ್ಕಗೊಂಡನಹಳ್ಳಿ ಪ್ರಾಥಮಿಕ ಶಾಲೆಗೆ 6 ಕೊಠಡಿ, ಕೂನಬೇವು ಪ್ರಾಥಮಿಕ ಶಾಲೆಗೆ 4 ಕೊಠಡಿ, ತುರುವನೂರು ಪ್ರೌಢಶಾಲೆಗೆ 6 ಕೊಠಡಿ ನಿರ್ಮಾಣಕ್ಕೆ ಅನುದಾನ ನೀಡಿದ್ದು ಮುದ್ದಪುರದಲ್ಲಿ ಸರ್ಕಾರಿ ಪ್ರಾಥಮಿಕ ಶಾಲೆಯಲ್ಲಿ 66 ಲಕ್ಷದ 6 ಕೊಠಡಿಗಳನ್ನು ಇಂದು ಉದ್ಘಾಟನೆ ಮಾಡಿದ್ದೇನೆ.

ಮಕ್ಕಳಿಗೆ ಗುಣಮಟ್ಟದ ಶಿಕ್ಷಣದ ಅವಶ್ಯಕತೆ ಇದ್ದು, ಶಿಕ್ಷಣದಿಂದ ನಾವೆಲ್ಲರೂ



ವಂಚಿತರಾಗಬಾರದು. ಶಿಕ್ಷಣಕ್ಕಾಗಿ ಸರ್ಕಾರ ಹಲವಾರು ಯೋಜನೆಗಳನ್ನು ಜಾರಿಗೊಳಿಸಿದೆ. ಮಕ್ಕಳಿಗೆ ಉಚಿತ ಶಿಕ್ಷಣ, ಉಚಿತ ಸಮವಸ್ತ್ರ, ಕ್ಷೀರಭಾಗ್ಯ, ಮೊಟ್ಟೆ ಸೇರಿ ಹಲವು ಸೌಲಭ್ಯ ಒದಗಿಸಲಾಗಿದೆ. ಪೋಷಕರು ಕಡ್ಡಾಯವಾಗಿ ಮಕ್ಕಳನ್ನು ಶಾಲೆಗೆ ಕಳುಹಿಸುವ ಮೂಲಕ ಮಕ್ಕಳಿಗೆ ಶಿಕ್ಷಣವನ್ನು ಕೊಡಿಸಬೇಕು ಎಂದು ಮನವಿ ಮಾಡಿದರು.

ಶಿಕ್ಷಣದಿಂದಲೇ ದೇಶದ ಅಭಿವೃದ್ಧಿ ಸಾಧ್ಯವಾಗಲಿದೆ. ಒಂದು ಹೆಣ್ಣು ಮಗು ಶಾಲೆ ಕಲಿತರೆ, ಇಡೀ ಕುಟುಂಬವೆ ಶಾಲೆ ಕಲಿತಂತೆ. ಈ ಹಿನ್ನೆಲೆಯಲ್ಲಿ ಗಂಡು, ಹೆಣ್ಣು ತಾರತಮ್ಯ ಮಾಡದೇ ಎಲ್ಲಾರೂ ಅಭ್ಯಾಸ ಮಾಡಬೇಕು. ಕ್ಷೇತ್ರದಲ್ಲಿ ಅಂಗವಾಡಿ ಕೇಂದ್ರಗಳು, ಶಾಲಾ ಕಟ್ಟಡಗಳು, ಆಸ್ಪತ್ರೆಗಳು, ರಸ್ತೆ, ಬ್ರಿಡ್ಜ್ ಕಂ ಬ್ಯಾರೇಜ್‌ಗಳಂತಹ ಹಲವಾರು ಅಭಿವೃದ್ಧಿ ಕಾಮಗಾರಿಗಳನ್ನು ಮಾಡಲಾಗಿದೆ. ಕಾಂಗ್ರೆಸ್ ಸರ್ಕಾರ ಬಡವರ ಪರವಾಗಿದ್ದು, ಬಡವರಿಗಾಗಿ ಅನೇಕ ಯೋಜನೆಗಳನ್ನು ರೂಪಿಸಲಾಗಿದೆ ಎಂದು ತಿಳಿಸಿದರು.

**ಆಂಜನೇಯ ಸ್ವಾಮಿ ದೇವಸ್ಥಾನ ಉದ್ಘಾಟನೆ:** ತುರುವನೂರು ಹೋಬಳಿಯ ಸೂರನಹಳ್ಳಿಯಲ್ಲಿ ಗ್ರಾಮದಲ್ಲಿ ಶಾಸಕರ ಅನುದಾನದಲ್ಲಿ 10 ಲಕ್ಷ ನೀಡಿದ್ದು ಶಾಸಕ ಟಿ.ರಘುಮೂರ್ತಿ ಅವರು ನೂತನವಾಗಿ ನಿರ್ಮಾಣವಾಗಿರುವ ಆಂಜನೇಯಸ್ವಾಮಿ ದೇವಸ್ಥಾನವನ್ನು ಲೋಕರ್ಪಣೆ ಮಾಡಿದರು.

**ಸುಲ್ತಾನಿಪುರ ಕೆರೆ ಬಾಗಿನ ಅರ್ಪಣೆ ಮತ್ತು ಸಿಸಿ ರಸ್ತೆ ಕಾಮಗಾರಿಗೆ ಚಾಲನೆ:** ತುರುವನೂರು ಹೋಬಳಿಯ ಸುಲ್ತಾನಿಪುರ ಕೆರೆ ಕೋಡಿ ಬಿದ್ದರಿಂದ ಇಂದು ಶಾಸಕ ಟಿ.ರಘುಮೂರ್ತಿ ಕೆರೆಗೆ ಬಾಗಿನ ಅರ್ಪಣೆ ಮಾಡಿ ಮಾತನಾಡಿ ಉತ್ತಮವಾಗಿ ಮಳೆ ನಡೆಸಿದ್ದರಿಂದ ಎಲ್ಲಾ ಕೆರೆ ಕಟ್ಟೆಗಳು ತುಂಬಿರುವುದು ಸಂತಸ ತಂದಿದೆ. ನೀರು ಇದ್ದರೆ ಎಲ್ಲಾ ಕೆಲಸ ಕಾರ್ಯಗಳು ಸುಗಮವಾಗಿ ನಡೆಯುತ್ತವೆ. ತುರುವನೂರು ಹೋಬಳಿಯಲ್ಲಿ ಕೆರೆ ಕಟ್ಟೆಗಳ ಜೊತೆ ಅನೇಕ ಕಡೆಗಳಲ್ಲಿ ಚಕ್ ಡ್ಯಾಂ ನಿರ್ಮಾಣಗಳನ್ನು ಸಹ ಮಾಡಿದ್ದು ಅಂತರ್ಜಲ ಹೆಚ್ಚಲು ಸಹಕಾರಿಯಾಗಿದೆ ಎಂದು ತಿಳಿಸಿದರು. ರೈತರ ಮೊಗದಲ್ಲಿ ಸಹ ಸಂತಸ ತಂದಿದ್ದು ಸೂರನಹಳ್ಳಿಯಲ್ಲಿ ಆಂಜನೇಯ ಸ್ವಾಮಿ ದೇವಸ್ಥಾನ ಉದ್ಘಾಟನೆ ವೇಳೆ ಮುಂದಿನ ವರ್ಷ ಸಹ ಉತ್ತಮ ಮಳೆ ಬೆಳೆಯಾಗಲಿ ಎಂದು ದೇವರಲ್ಲಿ ಪ್ರಾರ್ಥಿಸಿದ್ದೇನೆ. ಇದರ ಜೊತೆಗೆ 20 ಲಕ್ಷ ವೆಚ್ಚದಲ್ಲಿ ಸುಲ್ತಾನಿಪುರ ಗ್ರಾಮದಲ್ಲಿ ಸಿಸಿ ರಸ್ತೆಗೆ ಹಣ ನೀಡಲಾಗಿದೆ ಎಂದರು.

ಈ ಸಂದರ್ಭದಲ್ಲಿ ಚಳ್ಳಕೆರೆ ತಾಲೂಕು ಗ್ಯಾರೆಂಟಿ ಸಮಿತಿ ಅಧ್ಯಕ್ಷ ಬಾಬುರೆಡ್ಡಿ, ಕ್ಷೇತ್ರ ಶಿಕ್ಷಣಧಿಕಾರಿ ಎಸ್.ನಾಗಭೂಷಣ್, ಮುದ್ದಾಪುರ ಗ್ರಾ.ಪಂ ಅಧ್ಯಕ್ಷೆ ಮಂಗಳ ಸಿದ್ದೇಶ್, ಉಪಾಧ್ಯಕ್ಷ ಸುಧಾರಾಣಿ ನಾಗರಾಜ್, ಗ್ರಾಮ ಪಂಚಾಯತಿ ಸದಸ್ಯರಾದ ಓಬಳೇಶ್ ಶಾಂತಮ್ಮ, ನಾಗರಾಜ್ ಸುದಮ್ಮ, ಮುಖಂಡರುಗಳಾದ ತಿಮ್ಮರಾಜು, ಮಹೇಶ್, ನಾಗರಾಜ್ ಮತ್ತು ಮುಖಂಡರು, ಸಾರ್ವಜನಿಕರು ಭಾಗವಹಿಸಿದ್ದರು.

## ಪ್ರಪಂಚವನ್ನೇ ಬದಲಾಯಿಸುವ ಶಕ್ತಿ ಶಿಕ್ಷಣಕ್ಕಿದೆ: ಹೆಚ್ ಬಿಲ್ಲಪ್ಪ



» ಹೊಸದುರ್ಗ

ವ್ಯಕ್ತಿಯನ್ನು ಬದಲಾಯಿಸುವ ಶಕ್ತಿ ಶಿಕ್ಷಣಕ್ಕಿದೆ. ಅದೇ ಶಿಕ್ಷಣ ಈ ಜಗತ್ತನ್ನೇ ಬದಲಾಯಿಸುತ್ತದೆ. ಅಂತಹ ಶಕ್ತಿ ಹೊಂದಿರುವ ಶಿಕ್ಷಣ ಅತಿ ಶ್ರೇಷ್ಠವಾದದ್ದು. ಹಾಗಾಗಿ ಪೋಷಕರು ತಮ್ಮ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಿ, ವಿದ್ಯಾವಂತರನ್ನಾಗಿ ಮಾಡಬೇಕು ಎಂದು ಹೈಕೋರ್ಟ್ ನಿವೃತ್ತ ನ್ಯಾಯಮೂರ್ತಿ ಹೆಚ್ ಬಿಲ್ಲಪ್ಪ ತಿಳಿಹೇಳಿದರು. ಕಸಾಪ ತಾಲ್ಲೂಕು ಘಟಕದ ವತಿಯಿಂದ ಪಟ್ಟಣದ ಕನ್ನಡ ಭವನದಲ್ಲಿ ಶನಿವಾರ ಆಯೋಜಿಸಿದ್ದ 'ಎಸ್.ಎಸ್.ಎಲ್.ಸಿ ಹಾಗೂ ಪಿಯುಸಿಯಲ್ಲಿ ಕನ್ನಡ ವಿಷಯದಲ್ಲಿ ಪೂರ್ಣ ಅಂಕಗಳಿಸಿದ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ' ಸಮಾರಂಭ ಉದ್ಘಾಟಿಸಿ ಮಾತನಾಡಿದರು. ತಾಲ್ಲೂಕಿನಾದ್ಯಂತ ಕೃಷಿ, ಸಂಗೀತ, ಸಾಹಿತ್ಯ ಹೀಗೆ ಪ್ರತಿಯೊಂದು ಕ್ಷೇತ್ರದಲ್ಲಿಯೂ ಪರಿಣತಿ ಹೊಂದಿರುವವರಿದ್ದಾರೆ. ಆದರೆ ಅವರನ್ನು ಗುರುತಿಸಿ ಗೌರವಿಸುವಲ್ಲಿ ವಿಫಲರಾಗುತ್ತಿದ್ದೇವೆ. ಈ ಕಾರ್ಯ ಸಾಹಿತ್ಯ ಪರಿಷತ್ ಮಾಡಬಹುದು. ಮಗು ಜನ್ಮ ತಾಳಿದ್ದಾಗಲೆ ಈ ದೇಶದ ಪ್ರಜೆಯಾಗುತ್ತದೆ. ಇಂದಿನ ಮಕ್ಕಳೇ ರಾಷ್ಟದ ಭವಿಷ್ಯಗಳು. ದೇಶದ ಬಗ್ಗೆ ಪ್ರತಿಯೊಬ್ಬರು ಗೌರವ ಹೊಂದಿರಬೇಕು.

ಪುಟ 2

ಪ್ರಮುಖ ಸುದ್ದಿ

# ಚಿತ್ರದುರ್ಗ ಸಿಟಿ ಇನ್ ಸ್ಟಿಟ್ಯೂಟ್ ಚುನಾವಣೆಯಲ್ಲಿ ಎಲ್.ಎಲ್. ವೆಂಕಟೇಶ ರೆಡ್ಡಿಗೆ ಭರ್ಜರಿ ಗೆಲುವು

» ನಮ್ಮಜನ ಸಮಾಚಾರ

ಚಿತ್ರದುರ್ಗ: ಕೋಟೆ ನಾಡಿನ ಪ್ರತಿಷ್ಠಿತ ಸಿಟಿ ಇನ್ ಸ್ಟಿಟ್ಯೂಟ್ ಗೆ ಶನಿವಾರ ನಡೆದ ಚುನಾವಣೆಯಲ್ಲಿ ಎಲ್.ಎಲ್. ವೆಂಕಟೇಶ ರೆಡ್ಡಿ ಕಾರ್ಯದರ್ಶಿಯಾಗಿ, ಉಪಾಧ್ಯಕ್ಷ ರಾಗಿ ಟಿ.ಎಸ್.ಎನ್.ಜಯಣ್ಣ ಹಾಗೂ ಖಜಾಂಚಿ ಯಾಗಿ ಅಜಿತ್ ಕುಮಾರ್‌ಜೈನ್ ಭರ್ಜರಿ ಗೆಲುವು ಸಾಧಿಸಿ ಆಯ್ಕೆಯಾಗಿದ್ದಾರೆ.

ಚಿತ್ರದುರ್ಗ ಸಿಟಿ ಇನ್‌ಸ್ಟಿಟ್ಯೂಟ್‌ನ ಚುನಾವಣೆ ಸದ್ದಿಲ್ಲದಂತೆ ನಡೆಯುತ್ತಿತ್ತು ಆದರೆ ಈ ಬಾರಿ ಮಾತ್ರ ಬಾರಿ ಅಖಾಡದಲ್ಲಿ ಬಾರೀ ಪೈಪೋಟಿ ಏರ್ಪಟ್ಟಿದ್ದು ಜಿದ್ದಾ ಜಿದ್ದಿಯಿಂದ ಕೂಡಿತ್ತು.

ನ್ಯಾಯಾಲಯದಿಂದ ಮತ ಚಲಾಯಿಸುವ ಹಕ್ಕು ಪಡೆದು ಸದಸ್ಯರು ಚುನಾವಣೆಯಲ್ಲಿ ಪಾಲ್ಗೊಂಡಿದ್ದು ವಿಶೇಷವಾಗಿತ್ತು. ಮತದಾನ ಆರಂಭವಾಗುವ ಎರಡು ತಾಸು ಮುನ್ನ ಸದಸ್ಯರ ಪಟ್ಟಿ ನ್ಯಾಯಾಲಯದಿಂದ ಬಂದಿದ್ದು, ಚುನಾವಣೆ ಮತ್ತೊಂದು ಮಗ್ಗಿಲಿಗೆ ತಿರುವು



ಪಡೆಯಲು ಕಾರಣವಾಯಿತು ಎಂಬ ಸಾರ್ವಜನಿಕರಲ್ಲಿ ಕೇಳಿ ಬರುತ್ತಿದೆ.ಚುನಾವಣೆ ಘೋಷಣೆಯಾದಾಗ ಕೇವಲ 456 ಮಂದಿ ಮಾತ್ರ ಮತದಾನದ ಹಕ್ಕು ಪಡೆದಿದ್ದರು. ನಂತರ 98 ಜನರ ಪಟ್ಟಿಯೊಂದಕ್ಕೆ ಹೈಕೋರ್ಟ್ ಒಪ್ಪಿಗೆ ನೀಡಿ ಮತದಾನದ ಅವಕಾಶ ಕಲ್ಪಿಸಿತು. ಬಳಿಕ 32, ತರುವಾಯ 38 ಹಾಗೂ ಅಂತಿಮವಾಗಿ ಮತ್ತೆ 42 ಜನರಿಗೆ ಹೈಕೋರ್ಟ್ ಮತದಾನದ ಅವಕಾಶ ಮಾಡಿಕೊಟ್ಟಿತು. ಇದರಿಂದಾಗಿ ಒಟ್ಟು 666 ಮಂದಿ ಮತದಾನದ ಪ್ರಕ್ರಿಯೆಯಲ್ಲಿ ಪಾಲ್ಗೊಂಡರು.ಒಟ್ಟು ಹತ್ತು ಪದಾಧಿಕಾರಿ ಹುದ್ದೆಗೆ ಚುನಾವಣೆ ನಡೆದಿದ್ದು, 22 ಮಂದಿಸ್ಪರ್ಧಿಸಿದ್ದರು. ಕಾರ್ಯದರ್ಶಿ, ಉಪಾಧ್ಯಕ್ಷರ ಸ್ಥಾನಕ್ಕೆ ತಲಾ ಇಬ್ಬರು ಹಾಗೂ ಖಜಾಂಚಿಗೆ ಮೂವರು ಸ್ಪರ್ಧಿಸಿದ್ದು, ಉಳಿದ ಏಳು ನಿರ್ದೇಶಕರ ಸ್ಥಾನಕ್ಕೆ ಹದಿನೈದು ಮಂದಿ ಕಣದಲ್ಲಿದ್ದರು.ಶನಿವಾರ ಬೆಳಿಗ್ಗೆ 9 ಗಂಟೆಗೆ ಆರಂಭವಾದ ಮತದಾನದಲ್ಲಿ ಚಿತ್ರದುರ್ಗ ಜಿಲ್ಲೆಯಷ್ಟೇ ಅಲ್ಲದೆ ಬೆಂಗಳೂರು, ದಾವಣಗೆರೆ ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳಲ್ಲಿರುವ ಸದಸ್ಯರು ಗುಂಪುಗಳಾಗಿ ಆಗಮಿಸಿ ಮತ ಚಲಾಯಿಸಿದರು. ಮತ ಗಟ್ಟಿಗೆ ಹೋಗುವ ಕಡೇ ಗಳಿಗೆಯವರೆಗೆ ಮತದಾರರ ಮನವೊಲಿಸುವ ದೃಶ್ಯಗಳು ಸಾಮಾನ್ಯವಾಗಿದ್ದವು. ಚುನಾವಣೆ ಹಿನ್ನಲೆ ಬಿಗಿ ಪೊಲೀಸ್ ಬಂದೋ ಬಸ್ತ್ ಏರ್ಪಡಿಸಲಾಗಿತ್ತು. ಮತದಾನ 4 ಗಂಟೆಗೆ ಪೂರ್ಣಗೊಂಡ ನಂತರ 4.15 ಸುಮಾರಿಗೆ ಮತ ಎಣಿಕೆ ಕೈಗೆತ್ತಿಕೊಳ್ಳಲಾಯಿತು. ಆರಂಭದಲ್ಲಿ ಕಾರ್ಯದರ್ಶಿ, ಉಪಾಧ್ಯಕ್ಷ ಹಾಗೂ ಖಜಾಂಚಿ ಮತ ಪತ್ರಗಳ ಎಣಿಕೆಗೆ ಹಾಕಲಾಯಿತು. ಅಂತಿಮವಾಗಿ ಕಾರ್ಯದರ್ಶಿ ಸ್ಥಾನಕ್ಕೆ ಎಲ್.ಎಲ್. ವೆಂಕಟೇಶರೆಡ್ಡಿ, ಉಪಾಧ್ಯಕ್ಷರಾಗಿ ಟಿ.ಎಸ್.ಎನ್ .ಜಯಣ್ಣ, ಖಜಾಂಚಿಯಾಗಿ ಅಜಿತ್ ಕುಮಾರ್ ಜೈನ್ ಆಯ್ಕೆಯ ಚುನಾವಣಾ ಅಧಿಕಾರಿ ಘೋಷಿಸಿದರು. ಸಿಟಿ ಇನ್ ಸ್ಟಿಟ್ಯೂಟ್ ಡಿಸಿ ಗೌರವಾಧ್ಯಕ್ಷರಾಗಿದ್ದರೆ, ಕಾರ್ಯದರ್ಶಿ ಹುದ್ದೆ ಪ್ರಮುಖವಾದುದು.

ಕಾರ್ಯದರ್ಶಿ ಸ್ಥಾನಕ್ಕೆ ಸ್ಪರ್ಧಿಸಿದ್ದವೆಂಕಟೇಶರೆಡ್ಡಿ 296 ಮತಪಡೆದರೆ, ಎದುರಾಳಿಮಾಜಿ ಕಾರ್ಯದರ್ಶಿ ಬಿ.ಚಿತ್ರಲಿಂಗಪ್ಪ 270 ಮತಗಳ ಪಡೆದರು. ಅಂತಿಮವಾಗಿ ವೆಂಕಟೇಶ ರೆಡ್ಡಿ 26 ಮತಗಳ ಅಂತರದಿಂದ ಜಯ ಸಾಧಿಸಿದರು.

## ಫಾಸ್ಟ್ ನ್ಯೂಸ್

### ಪ್ರಪಂಚವನ್ನೇ ಬದಲಾಯಿಸುವ ಶಕ್ತಿ ಶಿಕ್ಷಣಕ್ಕಿದೆ: ಹೆಚ್.ಬಿಲ್ಲಪ್ಪ

» ಮೊದಲ ಪುಟದಿಂದ

ತಾಯಿ ಮತ್ತು ತಾಯ್ನಾಡು ಸ್ವರ್ಗಕ್ಕಿಂತಲೂ ಮಿಗಿಲು. ಆತನ ಭವಿಷ್ಯ, ಸುಖ, ದುಃಖ ಎಲ್ಲವನ್ನೂ ನೀಡುವುದು ತಾಯ್ನಾಡು ಎಂದು ಹೇಳಿದರು. ಈ ವೇಳೆ ಕಸಾಪ ತಾಲ್ಲೂಕು ಅಧ್ಯಕ್ಷ ಬಿ.ಪಿ. ಓಂಕಾರಪ್ಪ, ಉಪಾಧ್ಯಕ್ಷ ಡಿ.ಟಿ. ಚಂದ್ರಶೇಖರ್, ಕಾರ್ಯದರ್ಶಿ ಸುಮತಿ ಕುಮಾರ್, ಮುಖ್ಯ ಅತಿಥಿಗಳಾಗಿ ಧನಂಜಯ್ ಮೆಂಗಸಂದ್ರ, ಬ. ಮೈಲಾರಪ್ಪ, ಆಗ್ರೋ ಶಿವಣ್ಣ, ಅಲ್ತಾಫ್ ಪಾಷಾ, ತುಂಬಿನಕೆರೆ ಬಸವರಾಜ್, ಮತ್ತೋಡಿನ ರಮೇಶ್ ಸೇರಿದಂತೆ ಸಾಹಿತ್ಯಾಸಕ್ತರು ಹಾಗೂ ವಿದ್ಯಾರ್ಥಿಗಳಿದ್ದರು.

### ಮೀರಸಾಬಿಹಳ್ಳಿ ಕೆರೆ ಏರಿಮೇಲೆ ಜೂಜಾಟ: 8200 ಹಣ ವಶ

» ಚಳ್ಳಕೆರೆ

ಇಸ್ಪೀಟ್ ಜೂಜಾಟ ಮುಂತಾದ ಕಾನೂನು ಬಾಹಿರ ಚಟುವಟಿಕೆಗಳನ್ನು ನಿಯಂತ್ರಿಸಲು ಪೊಲೀಸ್ ಇಲಾಖೆ ನಿರಂತರ ಪ್ರಾಮಾಣಿಕ ಪ್ರಯತ್ನ ನಡೆಸುತ್ತಿದ್ದರೂ ಇಲಾಖೆ ಕಣ್ಣು ತಪ್ಪಿಸಿ ಜೂಜಾಟವಾಡುತ್ತಿದ್ದ ತಂಡವನ್ನು ಪತ್ತೆಹಚ್ಚಿ ವಶಕ್ಕೆ ಪಡೆಯುವಲ್ಲಿ ಪೊಲೀಸರು ಸಫಲರಾಗಿದ್ದಾರೆ. ಗ್ರಾಮದ ಗಸ್ತು ಸಿಬ್ಬಂದಿ ಮುಖ್ಯಪೇದೆ ವಸಂತಕುಮಾರ್, ಭಾಗ್ಯಮ್ಮ ಇವರಿಗೆ ಬಂದ ಮಾಹಿತಿ ಆಧರಿಸಿ ವೃತ್ತ ನಿರೀಕ್ಷಕ ರಾಜಫಕೃದ್ದೀನ್ ದೇಸಾಯಿ ಮಾರ್ಗದರ್ಶನದಲ್ಲಿ ಮೀರಸಾಬಿಹಳ್ಳಿ ಗ್ರಾಮ ಪಂಚಾಯಿತಿಯ ರಂಗವ್ವನಹಳ್ಳಿ ಕೆರೆ ಏರಿಕಾಲುವೆಮೇಲೆ ಜೂಜಾಟವಾಡುತ್ತಿದ್ದ ಕರಿಯಣ್ಣ ಇತರರನ್ನು ವಶಕ್ಕೆ ಪಡೆದು ಅವರಿಂದ ಜೂಜಾಟದ ಹಣ 8200 ವಶಪಡಿಸಿಕೊಂಡಿದ್ದು, ಎಎಸ್ಐ ನಾಗೇಂದ್ರಪ್ಪ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ಧಾರೆ.

### ವಿದ್ಯಾರ್ಥಿ ಚೇತನ ಆಯುಷ್ ಸೇವಾ ಕಾರ್ಯಕ್ರಮ

» ದಾವಣಗೆರೆ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಸಮಾಜ ಕಲ್ಯಾಣ ಇಲಾಖೆ ಹಾಗೂ ಆಯುಷ್ ಇಲಾಖೆ ವತಿಯಿಂದ ಎಸ್.ಸಿ.ಎಸ್.ಪಿ ಮತ್ತು ಟಿ.ಎಸ್.ಪಿ ಯೋಜನೆಯಡಿ ಕಾಕನೂರಿನ ಸಮಾಜ ಕಲ್ಯಾಣ ಇಲಾಖೆಯ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿ ವಿದ್ಯಾರ್ಥಿ ಚೇತನ ಆಯುಷ್ ಸೇವಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಜಿಲ್ಲಾ ಆಯುಷ್ ಅಧಿಕಾರಿಗಳು ಡಾ. ಯೋಗೇಂದ್ರಕುಮಾರ್ ಬಿ. ಯು. ಕಾರ್ಯಕ್ರಮಕ್ಕೆ ಚಾಲನೆ ನೀಡಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಮಕ್ಕಳಿಗೆ ಆಯುಷ್ ಬುದ್ದಿಮಟ್ಟ ಪರೀಕ್ಷೆ ಮಾಡಿ ನಂತರ ವಿದ್ಯಾರ್ಥಿನಿಯರಿಗೆ ಪಾನಕ ಕೊಡಲಾಯಿತು, ಮಕ್ಕಳ ಆರೋಗ್ಯ ತಪಾಸಣೆ ಮಾಡಿ ಲಭ್ಯವಿದ್ದ ಔಷಧಗಳನ್ನು ವಿತರಿಸಲಾಯಿತು. ಹಾಗೂ ವಸತಿ ನಿಲಯದ ವಿದ್ಯಾರ್ಥಿಗಳಿಗೆ ಕಾರ್ಯಕ್ರಮದ ಸಂಪೂರ್ಣ ಮಾಹಿತಿ ಯನ್ನು ನೀಡಲಾಯಿತು. ಯೋಗ ತರಬೇತುದಾರರಿಂದ ಯೋಗ ಪ್ರಾತ್ಯಕ್ಷಿಕೆಯನ್ನು ನೀಡಲಾಯಿತು. ಈ ಕಾರ್ಯಕ್ರಮದಲ್ಲಿ ವೈದ್ಯಾಧಿಕಾರಿಗಳಾದ ಡಾ. ಶಾಲಿನಿ ಡಿ. , ಡಾ. ಸದಾಶಿವ ಕೆ, ಡಾ.ಸಿದ್ದೇಶ್, ಡಾ. ಶ್ವೇತ ಡಿ ಎಂ. , ವಸತಿ ನಿಲಯದ ಪ್ರಾಂಶುಪಾಲರಾದ ಪುರದ್, ಹಾಗೂ, ಎಲ್ಲಾ ಆಯುಷ್ ಸಿಬ್ಬಂದಿಗಳು ಮತ್ತು ಯೋಗ ತರಬೇತುದಾರರು ಹಾಜರಿದ್ದರು.

### ವ್ಯಕ್ತಿ ಕಾಣೆ

» ದಾವಣಗೆರೆ

ದಾವಣಗೆರೆ ತಾಲ್ಲೂಕಿನ ದೊಡ್ಡಬಾತಿ ಗ್ರಾಮ ವಾಸಿಯಾದ ಹಾಲೇಶಪ್ಪ ಬಿನ್ ದುಗ್ಯಾನಾಯ್ಕ 49 ವರ್ಷ ಇವರು 27.11.2024 ಕ್ಕಿಂತ ಒಂದು ತಿಂಗಳ ಹಿಂದೆ ಮನೆಯಿಂದ ಹೋದವರು ಇಲ್ಲಿವರೆಗೂ ವಾಪಸ್ ಬಂದಿರುವುದಿಲ್ಲ. ಚಹರೆ ವಿವರ: 5.2 ಅಡಿ ಎತ್ತರ, ಎಣ್ಣೆಗೆಂಪು ಮೈ ಬಣ್ಣ, ಸಾಧಾರಣ ಮೈಕಟ್ಟು , ಬಿಳಿ ಪ್ಯಾಂಟ್, ಬಿಳಿ ಶರ್ಟ್ ಧರಿಸಿರಿತ್ತಾರೆ. ಇವರ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ದಾವಣಗೆರೆ ಕಂಟ್ರೋಲ್ ರೂಂ 08192-253100, ದಾವಣಗೆರೆ ಗ್ರಾಮಾಂತರ ಪೊಲೀಸ್ ಠಾಣೆ ನಂ.08192-262555 ದಾವಣಗೆರೆ ಗ್ರಾಮಾಂತರ ಉಪವಿಭಾಗ 08192-262550 ಗೆ ಕರೆ ಮಾಡಿ ತಿಳಿಸಬಹುದಾಗಿದೆ.

### ವ್ಯಕ್ತಿ ಕಾಣೆ

» ದಾವಣಗೆರೆ

ದಾವಣಗೆರೆ ತಾಲ್ಲೂಕಿನ ದ್ಯಾಮವ್ವನಹಳ್ಳಿ ಗ್ರಾಮ ವಾಸಿಯಾದ ಡಿ.ಕೆ.ಬಸವರಾಜಪ್ಪ ಬಿನ್ ಲೇಟ್ ಸಿದ್ದಪ್ಪ 75 ವರ್ಷ ಇವರು 23.11.2024 ರಂದು ಮದ್ಯಾಹ್ನ 3.30 ಕ್ಕೆ ಮನೆಯಿಂದ ಹೋದವರು ಇಲ್ಲಿವರೆಗೂ ವಾಪಸ್ ಬಂದಿರುವುದಿಲ್ಲ. ಚಹರೆ ವಿವರ: 5.5 ಅಡಿ ಎತ್ತರ, ತೆಳ್ಳನೆ ಮೈಕಟ್ಟು , ಎಣ್ಣೆಗೆಂಪು ಬಣ್ಣ , ತುಂಬು ತೋಳಿನ ಬಿಳಿ ಅಂಗಿ, ಬಿಳಿ ಪಂಚೆ ಧರಿಸಿರಿತ್ತಾರೆ. ಇವರ ಬಗ್ಗೆ ಮಾಹಿತಿ ತಿಳಿದು ಬಂದಲ್ಲಿ ದಾವಣಗೆರೆ ಕಂಟ್ರೋಲ್ ರೂಂ 08192-253100, ದಾವಣಗೆರೆ ಗ್ರಾಮಾಂತರ ಪೊಲೀಸ್ ಠಾಣೆ ನಂ.08192-262555 ದಾವಣಗೆರೆ ಗ್ರಾಮಾಂತರ ಉಪವಿಭಾಗ 08192-262550 ಗೆ ಕರೆ ಮಾಡಿ ತಿಳಿಸಬಹುದಾಗಿದೆ.

# ಡಿ.20ರಂದು ಗ್ರಾಪಂ ನೌಕರರ ಚಳುವಳಿಗೆ ಕರೆ

» ಚಿತ್ರದುರ್ಗ

ಗ್ರಾಮ ಪಂಚಾಯಿತಿ ನೌಕರರ ನ್ಯಾಯಯುತವಾದ ಬೇಡಿಕೆಗಳ ಈಡೇರಿಕೆಗಾಗಿ ಡಿ.20 ರಂದು ರಾಜ್ಯಾದ್ಯಂತ ಚಳುವಳಿಗೆ ಕರೆ ನೀಡಿರುವುದರಿಂದ ಜಿಲ್ಲಾ ಪಂಚಾಯಿತಿಗೆ ಮುತ್ತಿಗೆ ಹಾಕಲಾಗುವುದೆಂದು ಕರ್ನಾಟಕ ರಾಜ್ಯ ಗ್ರಾಮ ಪಂಚಾಯಿತಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಡಿ.ಎಂ.ಮಲಿಯಪ್ಪ ತಿಳಿಸಿದರು.

ಸಿ.ಐ.ಟಿ.ಯು. ವತಿಯಿಂದ ತ.ರಾ.ಸು. ರಂಗಮಂದಿರದಲ್ಲಿ ಶನಿವಾರ ಏರ್ಪಡಿಸಲಾಗಿದ್ದ ಗ್ರಾಮ ಪಂಚಾಯಿತಿ ನೌಕರರ ಜಿಲ್ಲಾ ಮಟ್ಟದ ಸಮಾವೇಶ ಉದ್ಘಾಟಿಸಿ ಮಾತನಾಡಿದರು.

ಗ್ರಾಮ ಪಂಚಾಯಿತಿ ನೌಕರರ ಬೇಡಿಕೆಗಳಿಗಾಗಿ ಹತ್ತಾರು ವರ್ಷಗಳಿಂದಲೂ ನಿರಂತರವಾಗಿ ಹೋರಾಟ ಮಾಡಿಕೊಂಡು ಬರುತ್ತಿದ್ದೇವೆ. ಸ್ವಚ್ಚ ವಾಹಿನಿಯರಿಗೆ ಕಿರುಕುಳ ನೀಡುವ ವಾತಾವರಣ ಗ್ರಾಮ ಪಂಚಾಯಿತಿಗಳಲ್ಲಿ ಸೃಷ್ಠಿಯಾಗಿದೆ. ಆಳುವ ಸರ್ಕಾರಗಳಿಗೆ



ಬಡವರ ಬಗ್ಗೆ ಕಾಳಜಿಯಿಲ್ಲ. ಕಮ್ಯುನಿಸ್ಟ್ ಪಾರ್ಟಿ ದುಡಿಯುವ ವರ್ಗದ ಪರವಾಗಿದೆ. ಕಾರ್ಮಿಕರ ಜೀವನ ಹಸನುಗೊಳಿಸಲು ಸಂಘಟನೆ, ಹೋರಾಟದಿಂದ ಮಾತ್ರ ಸಾಧ್ಯ. ಅದಕ್ಕಾಗಿ ಡಿ.20 ರಂದು ಜಿಲ್ಲಾ ಪಂಚಾಯಿತಿ ಮುತ್ತಿಗೆಯಲ್ಲಿ ಗ್ರಾಮ ಪಂಚಾಯಿತಿ ನೌಕರರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಶಕ್ತಿ ಪ್ರದರ್ಶಿಸುವಂತೆ ಡಿ.ಎಂ.ಮಲಿಯಪ್ಪ ಮನವಿ ಮಾಡಿದರು.

ಗ್ರಾಮ ಪಂಚಾಯಿತಿ ನೌಕರರು ಯಾಮಾರಬಾರದು. ನಮ್ಮ ಹೋರಾಟದಿಂದ ಬಿಲ್ ಕಲೆಕ್ಟರ್‌ಗಳಿಗೆ ಬಡ್ತಿ ಸಿಕ್ಕಿದೆ. ಪ್ರತಿಯೊಬ್ಬರು ಸಂಘಕ್ಕೆ ಸದಸ್ಯರಾಗಿ ಜಿಲ್ಲಾ ಪಂಚಾಯಿತಿಗೆ ಮುತ್ತಿಗೆ ಹಾಕುವ ಮುನ್ನ ಜಿಲ್ಲೆಯ ಬೇರೆ ತಾಲ್ಲೂಕುಗಳಲ್ಲಿ ಸಮಾವೇಶ ನಡೆಸಬೇಕಿದೆ. ಚಳಿಗಾಲದ ಅಧಿವೇಶನದಲ್ಲಿ ಗ್ರಾಮ ಪಂಚಾಯಿತಿ ನೌಕರರ ಬೇಡಿಕೆಗಳ ಕುರಿತು ಚರ್ಚೆಯಾಗಬೇಕೆಂದುಡಿ.ಎಂ.ಮಲಿಯಪ್ಪ ಒತ್ತಾಯಿಸಿದರು.2024-25 ನೇ ಸಾಲಿನ ಅಂತಿಮ ಜೇಷ್ಠತಾ ಪಟ್ಟಿ ಬಿಡುಗಡೆಗೊಳಿಸಿ ಮುಂಬಡ್ತಿ ಪ್ರಕ್ರಿಯೆಯನ್ನು ಶೀಘ್ರವೇ ಜಾರಿಗೊಳಿಸಬೇಕು. ಜಿಲ್ಲೆಯ ಎಲ್ಲಾ ಗ್ರಾಮ ಪಂಚಾಯಿತಿ ನೌಕರರಿಗೆ ತುಟ್ಟಿ ಭತ್ಯೆ ನೀಡಬೇಕು. 20 ತಿಂಗಳ ನಿವೃತ್ತಿ ವೇತನ ಹಾಗೂ ಮರಣ ಹೊಂದಿರುವ ಸಿಬ್ಬಂದಿಗಳ ಕುಟುಂಬಕ್ಕೆ ಪರಿಹಾರ ನೀಡಬೇಕು. ಜಿಲ್ಲೆಯಲ್ಲಿರುವ ಸಿಬ್ಬಂದಿಗಳಿಗೆ ಬಾಕಿ ವೇತನ ಶೀಘ್ರವೇ ಬಿಡುಗಡೆಗೊಳಿಸುವಂತೆ ಸಮಾವೇಶದಲ್ಲಿ ಆಗ್ರಹಿಸಲಾಯಿತು.

ಕರ್ನಾಟಕ ರಾಜ್ಯ ಗ್ರಾಮ ಪಂಚಾಯಿತಿ ನೌಕರರ ಸಂಘದ ರಾಜ್ಯಾಧ್ಯಕ್ಷ ಎಂ.ಬಿ.ನಾಡೇಗೌಡ್ರು, ಉಪಾಧ್ಯಕ್ಷ ಬಿ.ವೆಂಕಟೇಶ್, ಖಜಾಂಚಿ ಶಿವಣ್ಣ ಬಿ. ಕಾರ್ಯದರ್ಶಿ ರಂಗನಾಥ

ಜ್ಯೋತಿ, ಜಯಲಕ್ಷ್ಮಿ, ತನುಜ, ಸುನಿತ ಇವರುಗಳು ವೇದಿಕೆಯಲ್ಲಿದ್ದರು.

# ಜನಪದ ಸಾಂಸ್ಕೃತಿಕ ಉತ್ಸವಕ್ಕೆ ಚಾಲನೆ

» ಚಿತ್ರದುರ್ಗ

ಜಾನಪದ ಕಲೆಯನ್ನು ವಿಶ್ವಕ್ಕೆ ಪಸರಿಸಿರುವ ಜಾನಪದ ಕಲಾವಿದರ ಬದುಕು ಸಂಕಷ್ಟದಲ್ಲಿದೆ ಎಂದು ಧಮ್ಮ ಕೇಂದ್ರದ ಆರ್.ವಿಶ್ವಸಾಗರ್ ಹೇಳಿದರು.

ಧ್ವನಿ ಗ್ರಾಮೀಣಾಭಿವೃದ್ದಿ ಮತ್ತು ಸಾಂಸ್ಕೃತಿಕ ಕಲಾ ಸಂಘ ಹುಲ್ಲೂರು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇವುಗಳ ಸಹಯೋಗದೊಂದಿಗೆ ಮಠದ ಕುರುಬರಹಟ್ಟಿಯಲ್ಲಿರುವ ಬಸವೇಶ್ವರ ವಿದ್ಯಾಸಂಸ್ಥೆಯಲ್ಲಿ ಶನಿವಾರ ಹಮ್ಮಿಕೊಳ್ಳಲಾಗಿದ್ದ ಜನಪದ ಸಾಂಸ್ಕೃತಿಕ ಉತ್ಸವ ಹಾಗೂ ಕಲಾವಿದರಿಗೆ ಸನ್ಮಾನ ಸಮಾರಂಭ ಉದ್ಘಾಟಿಸಿ ಮಾತನಾಡಿದರು.

ಜಾನಪದ ಕಲೆಗಳಾದ ತಮಟೆ, ಹಾರ್ಮೋನಿಯಂ, ಕಹಳೆ, ತಬಲ, ಮದ್ದಲೆ ಇವುಗಳು ಕ್ಷೀಣಿಸುತ್ತಿವೆ. ಗ್ರಾಮೀಣ ಭಾಗದ ಅವಿದ್ಯಾವಂತರುಗಳಿಂದ ಹುಟ್ಟಿದ ಜಾನಪದ ಕಲೆಯನ್ನು ಉಳಿಸಿ ಬೆಳೆಸಿ ಕಲಾವಿದರನ್ನು ಪ್ರೋತ್ಸಾಹಿಸಬೇಕಿದೆ. ಕಲಾವಿದರುಗಳಿಗೆ ಆಸೆ, ದುರಾಸೆಯಿಲ್ಲ. ಕಲೆಯಿಂದಲೆ ಜೀವನದಲ್ಲಿ ಸಂತೃಪ್ತಿ ಕಂಡುಕೊಳ್ಳುತ್ತಿದ್ದಾರೆಂದರು.

ಕಡ್ಲೆಗುದ್ದು ಆಂಜನೇಯಸ್ವಾಮಿ ಪ್ರೌಢಶಾಲೆಯ ಮುಖ್ಯಶಿಕ್ಷಕಡಾ.ಮಹೇಶ್ ಮಾತನಾಡಿ ಜಾನಪದ ನಮ್ಮ ಮೂಲ ಸಂಸ್ಕೃತಿ. ಜನಪದವೆಂದರೆ ಆಲದ ಮರವಿದ್ದಂತೆ. ಕಲಾವಿದರು ಅದರ ಬೇರುಗಳು. ಮೊಬೈಲ್, ಟಿ.ವಿ. ಹಾವಳಿಯಿಂದ ಜನಪದ ಕಣ್ಮರೆಯಾಗುತ್ತಿರುವುದು ನೋವಿನ ಸಂಗತಿ. ಜನಪದ ಹಾಡುಗಳನ್ನು ಕೇಳುತ್ತಿದ್ದರೆ ಮನಸ್ಸಿಗೆ ಉಲ್ಲಾಸವಾಗುತ್ತದೆ ಎಂದು ತಿಳಿಸಿದರು.



ಕಲಾವಿದರ ಬದುಕು ಬಡತನದಲ್ಲಿದೆ. ಕಲಾವಿದರಿಗೆ ತಕ್ಕಂತೆ ಸಂಭಾವನೆ ಸಿಗುತ್ತಿಲ್ಲ. ಎಲ್ಲರ ಮನೆ ಮನದಲ್ಲಿ ಜನಪದವಿರಬೇಕು. ಆಧುನಿಕ ಸಂಸ್ಕೃತಿಗೆ ಮಾರು ಹೋಗಿರುವುದರಿಂದ ಜನಪದ ಹಾಡುಗಳನ್ನು ಕೇಳುವವರಿಲ್ಲದಂತಾಗಿದ್ದಾರೆ. ಮುಂದಿನ ಪೀಳಿಗೆಗೆ ಜನಪದ ಉಳಿಸಬೇಕಿದೆ ಎಂದರು.

ಧ್ವನಿ ಗ್ರಾಮೀಣಾಭಿವೃದ್ದಿ ಮತ್ತು ಸಾಂಸ್ಕೃತಿಕ ಕಲಾ ಸಂಘದ ಕಾರ್ಯದರ್ಶಿ ಎ.ಕೃಷ್ಣಪ್ಪ ಮಾತನಾಡುತ್ತ ಟಿ.ವಿ. ಮೊಬೈಲ್ ಬಂದ ಮೇಲೆ ಜನಪದ ಹಿಂದೆ ಸರಿದಿದೆ. ಸುಗ್ಗಿ ಕಾಲದಲ್ಲಿನ ಜಾನಪದ ಹಾಡುಗಳು ಕಿವಿಗೆ ಇಂಪಾಗಿರುತ್ತಿದ್ದವು. ಕೊಂಬು, ಕಹಳೆ ಮಹರಾಜರ ಕಾಲದಲ್ಲಿ ಮೊಳಗುತ್ತಿತ್ತು. ಕೋಲಾಟ, ಗೀಗಿಪದ, ಸೋಬಾನೆ, ಉರುಮೆ, ತಮಟೆ, ಟ್ರಾಶ್ ವಾದ್ಯ ನುಡಿಸುವವರು ಕಮ್ಮಿಯಾಗಿದ್ದಾರೆ. ದೇಹಕ್ಕೆ ಶ್ರಮವಿಲ್ಲದಂತಾಗಿರುವುದರಿಂದ ರಕ್ತದೊತ್ತಡ, ಸಕ್ಕರೆ ಕಾಯಿಲೆ ಎಲ್ಲರನ್ನು ಕಾಡುತ್ತಿದೆ. ಕಲೆಯಿದ್ದರೆ ಎಲ್ಲಿ ಬೇಕಾದರೂ ಬೆಳೆಯಬಹುದೆಂದು ಕಲೆಯ ಮಹತ್ವ ತಿಳಿಸಿದರು.

ಬಸವೇಶ್ವರ ವಿದ್ಯಾಸಂಸ್ಥೆ ಅಧ್ಯಕ್ಷೆ ಪ್ರಭಾವತಿ ಶಂಕರಪ್ಪ ಅಧ್ಯಕ್ಷತೆ ವಹಿಸಿದ್ದರು.

ಕಾರ್ಯದರ್ಶಿ ವಿ.ಕೆ.ಶಂಕರಪ್ಪ, ಧಮ್ಮ ಕೇಂದ್ರದ ಅಧ್ಯಕ್ಷೆ ಅನ್ನಪೂರ್ಣ ವಿಶ್ವಸಾಗರ್, ನೀಲಮ್ಮ ಎ.ಕೃಷ್ಣಪ್ಪ ವೇದಿಕೆಯಲ್ಲಿದ್ದರು.

ಜಾನಪದ ಹಾಡುಗಾರ ಹರೀಶ್ ಜಾನಪದ ಹಾಡುಗಳನ್ನು ಹಾಡಿ ವಿಕಲಚೇತನ ಮಕ್ಕಳನ್ನು ರಂಜಿಸಿದರು.

## ಕಲಾಶ್ರೀ ಸ್ಪರ್ದೆ: ಹರ್ಷಿಣಿಗೆ ಬಹುಮಾನ





» ಚಿತ್ರದುರ್ಗ

ಬೆಂಗಳೂರು ರಾಜ್ಯಬಾಲ ಭವನ ಸೊಸೈಟಿಯಲ್ಲಿ ಜರುಗಿದ ರಾಜ್ಯ ಮಟ್ಟದ ಕಲಾಶ್ರೀ ಸ್ಪರ್ಧೆಯಲ್ಲಿ ಜಿಲ್ಲೆಯಿಂದ ಭಾಗವಹಿಸಿದ ಹರ್ಷಿಣಿ ಸಮಾಧನಕರ ಬಹುಮಾನ ಪಡೆದಿದ್ದಾರೆ. ನ.27 ರಿಂದ ನ.29 ವರೆಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ವತಿಯಿಂದ 3 ದಿನಗಳ ರಾಜ್ಯ ಮಟ್ಟದ ಕಲಾಶ್ರೀ ಸ್ಪರ್ದೆಗಳನ್ನು ರಾಜ್ಯ ಬಾಲ ಭವನ ಸೊಸೈಟಿಯಲ್ಲಿ ಆಯೋಜಿಸಲಾಗಿತ್ತು. ಕಾರ್ಯಕ್ರಮದಲ್ಲಿ ಇಲಾಖೆ ಸಚಿವ ಲಕ್ಷ್ಮಿ ಹೆಬ್ಬಾಳ್ಕರ್, ಬಾಲ ಭವನ ಸೊಸೈಟಿ ಅಧ್ಯಕ್ಷ ಬಿ.ಆರ್.ನಾಯ್ಡು, ನಿರ್ದೇಶಕ ಸಿದ್ದೇಶ್ವರ, ಕಾರ್ಯದರ್ಶಿ ನಿಶ್ಚಲ್ ಉಪಸ್ಥಿತರಿದ್ದರು. ಚಿತ್ರದುರ್ಗ ಜಿಲ್ಲೆಯಿಂದ ವಿದ್ಯಾರ್ಥಿಗಳಾದ ಸಿಂಧು ,ಹರ್ಷಿಣಿ ಶೋಭಾ, ನಿತ್ಯಶ್ರೀ, ಸೂರ್ಯ, ಕಾರ್ತಿಕ್ ಪೂಜಾರ್ ಭಾಗವಹಿಸಿದ್ದರು. ಇವರೊಂದಿಗೆ ಬೆಂಗಾವಲು ಸಿಬ್ಬಂದಿಯಾಗಿ ಕಾರ್ಯಕ್ರಮ ಸಂಯೋಜಕ ಕುಮಾರ್, ಕೆ.ಪವಿತ್ರ, ಮನು ತೆರಳಿದ್ದರು ಎಂದು ಉಪನಿರ್ದೇಶಕ ಭಾರತಿ ಆರ್ ಬಣಕಾರ್ ತಿಳಿಸಿದ್ದಾರೆ.

# ತಂಬಾಕು ಸೇವನೆ ದುಷ್ಪಾರಿಣಾಮ ಕುರಿತು ಜಾಗೃತಿ

» ಚಿತ್ರದುರ್ಗ

ಹೊಸದುರ್ಗ ತಾಲ್ಲೂಕಿನ ಅಜ್ಜಂಪುರ ರಸ್ತೆಯ ನಗರ ಪ್ರದೇಶಗಳಲ್ಲಿ ಶುಕ್ರವಾರ ಜಿಲ್ಲಾ ಮತ್ತು ತಾಲ್ಲೂಕುಮಟ್ಟದ ತಂಬಾಕು ತನಿಖಾ ತಂಡವು ತಂಬಾಕು ಉತ್ಪನ್ನಗಳ ಮಾರಾಟಗಾರರ ಅಂಗಡಿಗಳಿಗೆ ಭೇಟಿ ನೀಡಿ, ಕೋಟ್ಪಾ-2023ರ ಕಾಯ್ದೆಯ ತಂಬಾಕು ಕಾರ್ಯಾಚರಣೆ ಕುರಿತು ಜಾಗೃತಿ ಮೂಡಿಸಲಾಯಿತು.

ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ವತಿಯಿಂದ ತಂಬಾಕು ಮುಕ್ತ ಯುವ ಅಭಿಯಾನ 2.0 ಅಂಗವಾಗಿ ಯುವಕರಿಗೆ ಮತ್ತು ಅಂಗಡಿಗಳ ಮಾಲೀಕರಿಗೆ ಕೋಟ್ಪಾ-2003ರ ಕಾಯ್ದೆಯ ತಂಬಾಕು ಕಾರ್ಯಾಚರಣೆ ನಡೆಸಲಾಯಿತು.

ಯುವ ಜನತೆಯು ಅತೀ ಹೆಚ್ಚಾಗಿ ತಂಬಾಕಿನ ದುಶ್ಚಟಗಳಿಗೆ ಒಳಗಾಗುತ್ತಿದ್ದಾರೆ. ಇದರಿಂದಾಗಿ ಸಮಾಜದಲ್ಲಿ ಸಾವಿನ ಸಂಖ್ಯೆಯಲ್ಲಿ ಹೆಚ್ಚಾಗಿ ಯುವಕರೇ ಬಲಿಯಾಗುತ್ತಿದ್ದಾರೆ ಎಂದು ಯುವಕರಿಗೆ ಮತ್ತು ಅಂಗಡಿ ಮಾಲೀಕರಿಗೆ ತಿಳಿಸುತ್ತಾ, ತಂಬಾಕು ಕಾರ್ಯಾಚರಣೆ ಮಾಡಿ ಸಾರ್ವಜನಿಕರಲ್ಲಿ ಮತ್ತು ಸಾರ್ವಜನಿಕ ಸ್ಥಳಗಳಲ್ಲಿ ಧೂಮಪಾನ ಮಾಡದಂತೆ, ಪಾನ್ ಮಸಾಲ, ತಂಬಾಕು ಜಗಿದು ಉಗಿಯದಂತೆ ಎಚ್ಚರಿಸಲಾಯಿತು.

ಸಂಬಂಧಪಟ್ಟ ಸೆಕ್ಷನ್-4, 6ಎ ಮತ್ತು 6ಬಿ ಬೋರ್ಡ್‌ಗಳನ್ನು ಹಾಕಲು ಸೂಚಿಸಲಾಯಿತು ಮತ್ತು ಸೆಕ್ಷನ್-4 ಅಡಿಯಲ್ಲಿ 14 ಕೇಸುಗಳನ್ನು ದಾಖಲಿಸಿ ರೂ. 1250 ದಂಡವನ್ನು ಮತ್ತು ಸೆಕ್ಷನ್-6ಎ ಅಡಿಯಲ್ಲಿ 07 ಕೇಸುಗಳನ್ನು ದಾಖಲಿಸಿ ರೂ. 550 ದಂಡವನ್ನು ವಸೂಲಿ ಮಾಡಲಾಯಿತು. ತಂಬಾಕು ದಾಳಿಯಲ್ಲಿ ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಜಿಲ್ಲಾ ಸಲಹೆಗಾರ ಬಿ.ಎಂ. ಪ್ರಭುದೇವ, ಹೊಸದುರ್ಗ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿಯ ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಸಿದ್ದರಾಮಪ್ಪ, ಪುರಸಭೆಯ ಆರೋಗ್ಯ ನಿರೀಕ್ಷಣಾಧಿಕಾರಿ ಬಸವರಾಜ ಇದ್ದರು.



## ಪ್ರಮುಖ ಸುದ್ದಿ

# ತಿಂಗಳ ರಜೆ: ಮನೆಯಿಂದ ಮಹಿಳೆ ಹೊರಗೆ

» ಚಿತ್ರದುರ್ಗ

ಜಿಲ್ಲೆಯ ಗೊಲ್ಲರಹಟ್ಟಿಗಳಲ್ಲಿ ಇನ್ನೂ ಮೌಡ್ಯಾಚರಣೆಗಳು ಜೀವಂತವಾಗಿವೆ. ಇದಕ್ಕೊಂದು ತಾಜಾ ಉದಾಹರಣೆ ಚಿತ್ರದುರ್ಗ ತಾಲ್ಲೂಕು, ಭರಮಸಾಗರ ಹೋಬಳಿಯ ತುರೆಬೈಲು ಗೊಲ್ಲರಹಟ್ಟಿ ಕಂಡುಬಂದಿದೆ. ತಿಂಗಳ ಮುಟ್ಟಾದ ಮಹಿಳೆಯನ್ನು ಸ್ವಂತದವರೇ ಮನೆಯಿಂದ ಹೊರ ಹಾಕಿದ್ದಾರೆ. ಜೀವ ವಿಕಾಸ ಕ್ರಿಯೆಯಲ್ಲಿ ಮುಟ್ಟಾಗುವಿಕೆ ನೈಸರ್ಗಿಕ ಕ್ರಿಯೆ. ದೈಹಿಕವಾಗಿ ಮಹಿಳೆಗೆ ದೊರೆತ ವರವದು. ಸಮಸ್ತ ಮಹಿಳೆಯರಿಗೆ ಮುಟ್ಟಾಗುವಿಕೆ ನಿಂತರೆ! ಮಾನವ ಸಂತತಿಗೆ ಕುತ್ತು! ಆದರೆ ಮಹಿಳೆ ಮುಟ್ಟಾಗುವುದನ್ನೇ ಪಾಪ ಎನ್ನುವಂತೆ ನೋಡುವ ಅಮಾನುಷ ಮೌಡ್ಯಾಚರಣೆ ಗೊಲ್ಲರಹಟ್ಟಿಗಳಲ್ಲಿ ಬೆಳದು ಬಂದಿದೆ. ಮುಟ್ಟಾದ ಸಂದರ್ಭದಲ್ಲಿ ಹೆಚ್ಚಿನ ಕಾಳಜಿಯ ಅವಶ್ಯಕತೆ ಇರುತ್ತದೆ. ಆದರೆ ಮುಟ್ಟಾದ ಮಹಿಳೆಯನ್ನು ಕಳಂಕಿತೆ ಎನ್ನುವಂತೆ ನೋಡುವ ಮನೋಭಾವ ಇರುವುದೇ ಖೇಧಕರ.

21ನೇ ಶತಮಾನದ ಕಾಲಾಯುಷ್ಯ ಮುಗಿಯುವ ಹಂತ ಬಂದರೂ, ಜಿಲ್ಲೆಯಲ್ಲಿ ಇಂತಹ ಅನಿಷ್ಠ ಪದ್ದತಿಗಳ ಬೇರು ಇನ್ನೂ ಗಟ್ಟಿಯಾಗಿರುವುದು, ಭಾರತೀಯ ಸಮಾಜದಲ್ಲಿ ಸಾಮಾಜಿಕ



ಚಲನೆಯ ಮಂದಗತಿಗೆ ಹಿಡಿದ ಕೈಗನ್ನಡಿ. ಸ್ವಾಂತ್ರತ್ಯ, ಆಧುನಿಕತೆ ವಿದ್ಯುತ್, ಟಿ.ವಿ., ರಸ್ತೆ ಸಂಪರ್ಕ ಗೊಲ್ಲರಹಟ್ಟಿಗಳಿಗೆ ತಲುಪಿದೆ. ಆದರೆ ಇವು ಮೌಡ್ಯವನ್ನೇ ಸಂಪ್ರದಾಯ ಎಂದು ಭಾವಿಸಿದ ಜಡ್ಡು ಗಟ್ಟಿದ ಜನರು ಮುಖ್ಯವಾಹಿನಿಗೆ ತರುವಲ್ಲಿ ವಿಫಲವಾಗಿವೆ.

ಇಂತಹ ಅನಿಷ್ಠ ಮೌಡ್ಯಾಚಾರಣೆಯನ್ನು ತೊಡದು ಹಾಕಲು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಹಾಗೂ ಶಿಶು ಅಭಿವೃದ್ಧಿ ಯೋಜನೆ ಇಲಾಖೆಗಳು ಸತತವಾಗಿ ಪ್ರಯತ್ನ ಪಡುತಿದ್ದಾರೆ. ಇದರ ಅಂಗವಾಗಿಯೇ ತುರೆಬೈಲು ಗೊಲ್ಲರಹಟ್ಟಿಯಲ್ಲಿ ಮೌಡ್ಯ ಪದ್ಧತಿ ಹಾಗೂ ಆಚರಣೆಗಳ ವಿರುದ್ಧ ಜಾಗೃತಿ ಕಾರ್ಯಕ್ರಮವನ್ನು ನ.29 ರಂದು ಹಮ್ಮಿಕೊಳ್ಳಾಗಿತ್ತು. ಈ ಕಾರ್ಯಕ್ರಮಕ್ಕೆ ಆಗಮಿಸಿದ ಅಧಿಕಾರಿಗಳಿಗೆ, ಮುಟ್ಟಾದ ಮಹಿಳೆ ಅಂಗನವಾಡಿ ಆವರಣದಲ್ಲಿ ಇರುವುದು ಕಂಡುಬಂದಿತ್ತು. ನಿರಾಶ್ರಿತರ ರೀತಿ, ತಟ್ಟೆ, ಲೋಟ, ಹೊದಿಕೆಯೊಂದಿಗೆ ಚಳಿಯಲ್ಲಿ ಮಹಿಳೆ ವಾಸ್ತವ್ಯ ಹೂಡಿದ್ದಳು. ಈ ಬಗ್ಗೆ ಗ್ರಾಮಸ್ಥರನ್ನು ವಿಚಾರಿಸಿದಾಗ ಹಲವಾರು ವರ್ಷಗಳಿಂದ ಈ ಪದ್ದತಿ ಆಚರಿಸಿಕೊಂಡು ಬಂದಿರುತ್ತಿದ್ದೇವೆ. ಊರಿನಲ್ಲಿ ಯಾವುದೇ ಹೆಣ್ಣು ಮಗಳು ಋತುಮತಿಯಾದರೆ, ಮುಟ್ಟಾದರೆ ಹಾಗೂ ಹೆರಿಗೆ ಆದರೆ ಪದ್ದತಿ ಪ್ರಕಾರ ಆ ಮಹಿಳೆ ಮನೆಯನ್ನು ತೊರೆದು ಬಯಲಲ್ಲಿ ವಾಸಿಸುವುದು ವಾಡಿಕೆಯಾಗಿದೆ ಎಂದು ಉತ್ತರಿಸಿದ್ದಾರೆ. ಅಧಿಕಾರಿಗಳು ಆಪ್ತ ಸಮಾಲೋಚನೆ ನಡಿಸಿ ಹಾಗೂ ಪೊಲೀಸ್ ದೂರು ದಾಖಲಿಸುವ ಬಗ್ಗೆ ಎಚ್ಚರಿಕೆ ನೀಡಿದ ಬಳಿಕ ಮಹಿಳೆ ಮನೆ ಸೇರಿದ್ದಾಳೆ.

ನಂತರನಡೆದಜಾಗೃತಿಕಾರ್ಯಕ್ರಮದಲ್ಲಿ ಲಿಂಗತಜ್ಞೆ ಡಿ.ಗೀತಾ ಇಂತಹ ಅನಿಷ್ಠ ಪದ್ಧತಿಗಳು ಕಂಡುಬಂದರೆ, ಮಹಿಳಾ ಸಹಾಯವಾಣಿ ಸಂಖ್ಯೆ 181 ಮತ್ತು ಪೊಲೀಸ್ ಸಹಾಯವಾಣಿ 112 ಕರೆ ಮಾಡುವಂತೆ ಗ್ರಾಮಸ್ಥರಿಗೆ ತಿಳಿಸಿದರು. ಬಾಲ್ಯ ವಿವಾಹ ಹಾಗೂ ಬಾಲ ಕಾರ್ಮಿಕರ ನಿಷೇಧ ಕಾಯ್ದೆ, ಪೋಕ್ಸೋ ಕಾಯಿದೆ, ಮಕ್ಕಳ ಸಹಾಯವಾಣಿ ಸಂಖ್ಯೆ 1098 ಸೇರಿದಂತೆ, ಬಾಲ ತಾಯಂದಿರು, ಸುರಕ್ಷಿತ ಸ್ಪರ್ಶ ಅಸುರಕ್ಷಿತ ಸ್ಪರ್ಶ, ಹಾಗೂ ಶಿಕ್ಷಣದ ಮಹತ್ವ ಹಾಗೂ ಮೌಢ್ಯ ಆಚರಣೆಗಳನ್ನು ಮಾಡದಂತೆ ಜಾಗೃತಗೊಳಿಸಿದರು. ಕಾರ್ಯಕ್ರಮದಲ್ಲಿ ರಾಷ್ಟ್ರೀಯ ಐಕ್ಯತ ಸಪ್ತಾಹ ಅಂಗವಗಿ ಪ್ರಮಾಣ ವಚನ ಬೋಧಿಸಲಾಯಿತು.

ಗ್ರಾ.ಪಂ.ಅಧ್ಯಕ್ಷೆ ರಾಧ, ಆರೋಗ್ಯ ಅಧಿಕಾರಿ ಸಾಧಿಕ್, ಪೊಲೀಸ್ ಇಲಾಖೆ ತಿಪ್ಪೇಸ್ವಾಮಿ, ಹಿರಿಯ ಆರೋಗ್ಯ ಸಹಾಯಕಿ ಕಮಲಮ್ಮ, ಅಂಗನವಾಡಿ ಮೇಲ್ವಿಚಾರಕಿ ಮಂಜುಳಾ, ಗ್ರಾಮದ ದೇವಸ್ಥಾನದ ಪೂಜಾರಿ ಮಾರಪ್ಪ, ಸೇರಿದಂತೆ ಅಂಗವಾಡಿ ಹಾಗೂ ಕಾರ್ಯಕರ್ತೆಯರು ಗ್ರಾಮಸ್ಥರು ಮಹಿಳೆಯರು ಈ ವೇಳೆ ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ಜ.11 ರಂದು ಗಾನ ಸಂಗಮಕ್ಕೆ ನೊಂದಾಯಿಸಿ

» ಚಿತ್ರದುರ್ಗ

ಪ್ರಜಾ ಕಲ್ಯಾಣ ಸಮಿತಿಯಿಂದ ಜ.11 ಮತ್ತು 12 ರಂದು ತ.ರಾ.ಸು.ರಂಗಮಂದಿರದಲ್ಲಿ ಆಯೋಜಿಸಲಾಗಿರುವ ಗಾನ ಸಂಗಮದಲ್ಲಿ ಭಾಗವಹಿಸುವವರು ತಮ್ಮ ಹೆಸರುಗಳನ್ನು ನೊಂದಾಯಿಸಿಕೊಳ್ಳಬಹುದಾಗಿದೆ. ಮೊದಲನೆ ಬಹುಮಾನ ನಲವತ್ತು ಸಾವಿರದ ಒಂದು ರೂ. ಎರಡನೆ ಬಹುಮಾನ 30 ಸಾವಿರದ ಒಂದು ರೂ. ಮೂರನೆ ಬಹುಮಾನ 20 ಸಾವಿರದ ಒಂದು ರೂ. ನಾಲ್ಕನೆ ಬಹುಮಾನ 10 ಸಾವಿರದ ಒಂದು ರೂ.ಗಳು. ಹೆಚ್ಚಿನ ಮಾಹಿತಿಗಾಗಿ ಮೊ :9945466939, 9902812005, 8792394520 ಸಂಖ್ಯೆಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಜಾ ಕಲ್ಯಾಣ ಸಮಿತಿ ಸಂಸ್ಥಾಪಕ ರಾಜ್ಯಾಧ್ಯಕ್ಷ ಹರೀಶ್ ಟಿ.ಎನ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಡಿಸೆಂಬರ್ 3 ರಂದು ವಿಶ್ವ ವಿಕಲಚೇತನರ ದಿನಾಚರಣೆ

» ದಾವಣಗೆರೆ

ಡಿಸೆಂಬರ್ 3 ರಂದು ಬೆಳಿಗ್ಗೆ 11 ಗಂಟೆಗೆ ಜಿಲ್ಲಾಧಿಕಾರಿಗಳ ಕಾರ್ಯಾಲಯದ ತುಂಗಭದ್ರ ಸಭಾಂಗಣದಲ್ಲಿ ವಿಶ್ವ ವಿಕಲಚೇತನರ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ. ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, , ವಿಕಲಚೇತನರ ಶ್ರೇಯೋಭಿವೃದ್ಧಿಗಾಗಿ ಶ್ರಮಿಸುತ್ತಿರುವ ಸ್ವಯಂ ಸೇವಾ ಸಂಘ ಸಂಸ್ಥೆಗಳ ಸಹಯೋಗದಲ್ಲಿ ಆಯೋಜಿಸಲಾದ ಕಾರ್ಯಕ್ರಮವನ್ನು ಗಣಿ ಮತ್ತು ಭೂವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ಉದ್ಘಾಟಿಸುವರು. ಶಾಸಕರಾದ ಡಾ.ಶಾಮನೂರು ಶಿವಶಂಕರಪ್ಪ ಅಧ್ಯಕ್ಷತೆ ವಹಿಸುವರು. ಮುಖ್ಯ ಅತಿಥಿಗಳಾಗಿ ಸಂಸದರಾದ ಡಾ.ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕರಾದ ಕೆ.ಎಸ್.ಬಸವಂತಪ್ಪ, ಜಗಳೂರು ಶಾಸಕ ಬಿ.ದೇವೇಂದ್ರಪ್ಪ, ಹೊನ್ನಾಳಿ ಶಾಸಕ ಶಾಂತನಗೌಡ ಡಿ.ಜಿ, ಚನ್ನಗಿರಿ ಶಾಸಕ ಬಸವರಾಜು ವಿ.ಶಿವಗಂಗಾ, ಹರಿಹರ ಶಾಸಕ ಬಿ.ಪಿ ಹರೀಶ್, ವಿಧಾನ ಪರಿಷತ್ ಸದಸ್ಯರಾದಎಸ್.ಎಲ್.ಭೋಜೇಗೌಡ,ಚಿದಾನಂದ ಎಂ.ಗೌಡ, ಡಿ.ಎಸ್ ಅರುಣ್, ಕೆ.ಎಸ್.ನವೀನ್, ಕೆ.ಅಬ್ದುಲ್ ಜಬ್ಬಾರ್, ಡಾ.ಧನಂಜಯ್ ಸರ್ಜಿ, ಡಿ.ಟಿ.ಶ್ರೀನಿವಾಸ್, ಮಹಾನಗರ ಪಾಲಿಕೆ ಮೇಯರ್ ಚಮನ್ ಸಾಬ್.ಕೆ, ದೂಡಾ ಅಧ್ಯಕ್ಷರಾದ ದಿನೇಶ್. ಕೆ.ಶೆಟ್ಟಿ, ಜಿಲ್ಲಾಧಿಕಾರಿ ಗಂಗಾಧರಸ್ವಾಮಿ.ಜಿ.ಎಂ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಉಮಾ ಪ್ರಶಾಂತ್, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್ ಬಿ. ಇಟ್ನಾಳ್ ಭಾಗವಹಿಸುವರು.

### ಬಿಜೆಪಿ ಸದಸ್ಯತ್ವ ಅಭಿಯಾನಕ್ಕೆ ವ್ಯಾಪಕ ಬೆಂಬಲ: ಭೂಲಿಂಗಪ್ಪ

» ಚಳ್ಳಕೆರೆ

ಗ್ರಾಮೀಣ ಪ್ರದೇಶಗಳಲ್ಲಿ ಭಾರತೀಯ ಜನತಾ ಪಕ್ಷದ ಸದಸ್ಯತ್ವವನ್ನು ಪಡೆಯಲು ಸ್ವಯಂ ಪ್ರೇರಣೆಯಿಂದ ಜನರು ಮುಂದೆ ಬರುತ್ತಿರುವುದು ಸಂತಸ ತಂದಿದೆ. ಸದಸ್ಯತ್ವ ಅಭಿಯಾನಕ್ಕೆ ಉತ್ತಮ ಪ್ರಕ್ರಿಯೆ ವ್ಯಕ್ತವಾಗಿದ್ದು ಪಕ್ಷವನ್ನು ಬಲಪಡಿಸಲು ಸದಸ್ಯತ್ವ ಅಭಿಯಾನ ಸಹಕಾರಿ ಎಂದು ಬಿಜೆಪಿ ಮಾಜಿ ಮಂಡಲಾಧ್ಯಕ್ಷ ಎಚ್.ಡಿ.ಭೂಲಿಂಗಪ್ಪ ತಿಳಿಸಿದರು. ಅವರು, ದೇವರಮರಿಕುಂಟೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ವಡೇರಹಳ್ಳಿ, ಬೊಂಬೇರಹಳ್ಳಿ ಯಲಗಟ್ಟೆ, ಗೊಲ್ಲರಹಟ್ಟಿ ಗ್ರಾಮಗಳಲ್ಲಿ ಸದಸ್ಯತ್ವ ಅಭಿಯಾನ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಗ್ರಾಮೀಣ ಭಾಗದ ಜನರೂ ಸಹ ಬಿಜೆಪಿ ಪರವಾಗಿದ್ದಾರೆಂಬುವುದು ಇದರಿಂದ ವ್ಯಕ್ತವಾಗಿದೆ ಎಂದರು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಬಾಳೆಮಂಡಿರಾಮದಾಸ್ ಮಾತನಾಡಿ, ಚಳ್ಳಕೆರೆ ವಿಧಾನಸಭಾ ಕ್ಷೇತ್ರವೂ ಸೇರಿದಂತೆ ಜಿಲ್ಲೆಯಾದ್ಯಂತ ಸದಸ್ಯತ್ವ ಅಭಿಯಾನ ಕಾರ್ಯಕ್ರಮ ಬಿರುಸಿನಿಂದ ಕೂಡಿದೆ. ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಮಾರ್ಗದರ್ಶನದಲ್ಲಿ ಮನೆ, ಮನೆಗೂ ತೆರಳಿ ಪಕ್ಷಕ್ಕೆ ಸದಸ್ಯತ್ವ ಸೇರ್ಪಡೆಗೆ ಮನವಿ ಮಾಡಿಕೊಳ್ಳಲಾಗುತ್ತಿದೆ. ಜನರು ಬಿಜೆಪಿ ಸದಸ್ಯತ್ವ ಅಭಿಯಾನ ಎಂದಕೂಡಲೇ ತಮ್ಮ ಹೆಸರನ್ನು ನೊಂದಾಯಿಸಿಕೊಳ್ಳುವುದು ಉತ್ತಮ ಬೆಳವಣಿಗೆ ಎಂದರು. ಬಿಜೆಪಿ ಯುವಮುಖಂಡ ಟಿ.ಮಂಜುನಾಥ, ಎಲೆವೀರಭದ್ರಪ್ಪ, ದಯಾನಂದ, ಯಲಗಟ್ಟೆಗೊಲ್ಲರಹಟ್ಟಿಶ್ರೀನಿವಾಸ್ ಮುಂತಾದವರುಸದಸ್ಯತ್ವ ಅಭಿಯಾನದಲ್ಲಿ ಪಾಲ್ಗೊಂಡಿದ್ದರು.

### ವರಲಕ್ಷ್ಮಿಕೃಷ್ಣಪ್ಪಶೆಟ್ಟಿ ನಿಧನ

» ಚಳ್ಳಕೆರೆ

ತಾಲ್ಲೂಕಿನ ತಿಮ್ಮಲಾಪುರ ಚಿಂದನೂರು ಕುಟುಂಬದ ಕೃಷ್ಣಪ್ಪಶೆಟ್ಟಿಯವರ ಧರ್ಮಪತ್ನಿ ವರಲಕ್ಷ್ಮಿಕೃಷ್ಣಪ್ಪಶೆಟ್ಟಿ(84) ಶನಿವಾರ ತಡರಾತ್ರಿ ಗಾಂಧಿನಗರದ ಅವರ ಸ್ವಗೃಹದಲ್ಲಿ ನಿಧನರಾದರು. ಮೃತ ವರಲಕ್ಷ್ಮಿಕೃಷ್ಣಪ್ಪಶೆಟ್ಟಿಯವರಿಗೆ ಮೂವರು ಗಂಡು, ಪುತ್ರಿಯರು ಹಾಗೂ ಅಪಾರಬಂಧುಬಳಗವನ್ನು ಅಗಲಿದ್ದಾರೆ. ಇವರ ಅಂತ್ಯಕ್ರಿಯೆ ಪಾವಗಡ ರಸ್ತೆಯ ಆರ್ಯವೈಶ್ಯ ಸಮಾಜದ ವೈಕುಂಠಧಾಮದಲ್ಲಿ ಭಾನುವಾರ ಮಧ್ಯಾಹ್ನ ನಡೆಯಿತು.

# ಕುಟುಂಬ ಯೋಜನಾ ಸೇವಾ ಸೌಲಭ್ಯ ಸಮುದಾಯದ ಮನಮುಟ್ಟಲಿ: ಡಾ.ಅಭಿನವ್

» ಚಿತ್ರದುರ್ಗ

ಜನಸಂಖ್ಯಾ ಸ್ಥಿರತೆ ಶಿಕ್ಷಣ, ಕುಟುಂಬ ಯೋಜನಾ ಸೇವಾ ಸೌಲಭ್ಯ ಸಮುದಾಯದ ಮನಮುಟ್ಟಬೇಕು ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಡಿ.ಎಂ.ಅಭಿನವ್ ಹೇಳಿದರು.

ನಗರದ ತಾಲ್ಲೂಕು ಆರೋಗ್ಯಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ನೂತನವಾಗಿ ಸೇವೆ ಸೇರಿದ ನರ್ಸಿಂಗ್ ಅಧಿಕಾರಿಗಳು, ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿಗಳು, ನಗರ ಆರೋಗ್ಯ ಕೇಂದ್ರಗಳ ವೈದ್ಯಾಧಿಕಾರಿಗಳು, ನಮ್ಮ ಕ್ಲಿನಿಕ್ ವೈದ್ಯಾಧಿಕಾರಿಗಳಿಗೆ ನೂತನ ಗರ್ಭ ನಿರೋಧಕಗಳ ಪರಿಚಯ ಕುರಿತು ಕಾರ್ಯಾಗಾರದಲ್ಲಿ ಅವರು ಮಾತನಾಡಿದರು.



ಜನಸಂಖ್ಯಾ ಸ್ಥಿರತೆಯನ್ನು ಕಾಪಾಡುವುದು. ಸರಿಯಾದ ಸಮಯದಲ್ಲಿ ಅರ್ಹ ದಂಪತಿಗಳಿಗೆ ಕುಟುಂಬ ಯೋಜನೆ ತಲುಪಿಸುವುದು. ಇಲಾಖೆಯಲ್ಲಿ ದೊರೆಯುವ ಕುಟುಂಬ ಯೋಜನಾ ಸೇವಾ ಸವಲತ್ತುಗಳ ಮಾಹಿತಿ ಶಿಕ್ಷಣದಲ್ಲಿ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿಯೂ ಕುಟುಂಬ ಯೋಜನೆಗಳನ್ನು ಪ್ರದರ್ಶಿಸುವ ಮಾಹಿತಿ ಶಿಕ್ಷಣ ಚೌಕ ತೆರೆಯುವುದು. ಸರಿಯಾದ ಸಮಯದಲ್ಲಿ ಸರಿಯಾದ ಗರ್ಭ ನಿರೋಧಕ ಬಳಕೆಯ ಆಯ್ಕೆ ಸ್ವಾತಂತ್ರ್ಯ ಅರ್ಹ ದಂಪತಿಗಳಿಗೆ ಬಿಡಬೇಕು. ಇದರಿಂದ ತಾಯಿ ಮರಣ ತಪ್ಪಿಸಬಹುದಾಗಿದೆ ಎಂದರು.

ಜಿಲ್ಲಾ ಕುಟುಂಬ ಯೋಜನೆ ಅನುಷ್ಠಾನಾಧಿಕಾರಿ ಡಾ. ರೇಖಾ ಮಾತನಾಡಿ, ಕುಟುಂಬ ಯೋಜನೆಗಳಲ್ಲಿ ಶಾಶ್ವತ ವಿಧಾನ ಮತ್ತು ತಾತ್ಕಾಲಿಕ ವಿಧಾನಗಳು ಇರುತ್ತದೆ. ಶಾಶ್ವತ ವಿಧಾನಗಳಲ್ಲಿ ಮಹಿಳೆಯರಿಗಾಗಿ ಟುಬೆಕ್ಟಮಿ ಲ್ಯಾಪ್ರೋಸ್ಕಪಿಕ್ ಶಸ್ತ್ರ ಚಿಕಿತ್ಸೆ ಉಚಿತವಾಗಿ ನೀಡಲಾಗುತ್ತದೆ. ಅದೇ ರೀತಿ ಪುರುಷರಿಗೆ ವ್ಯಾಸ್ಕಟಮಿ ಎನ್‌ಎಸ್‌ವಿ ಸೇವೆ ನೀಡಲಾಗುತ್ತದೆ. ತಾತ್ಕಾಲಿಕ ವಿಧಾನಗಳಲ್ಲಿ ನುಂಗುವ ಗುಳಿಗೆಗಳು ಛಾಯಾ ಮಾತ್ರೆ, ಮಾಲಾ ಎನ್ ಮಾತ್ರೆ, ವಂಕಿ ಐಯುಸಿಡಿ ಕಾಪರ್ ಟಿ ಅಂತರ ಗರ್ಭ ನಿರೋಧಕ ಚುಚ್ಚುಮದ್ದು ನೀಡಲಾಗುತ್ತದೆ. ಪುರುಷರಿಗೆ ನಿರೋದ್ ನೀಡಲಾಗುತ್ತೆದೆ. ಫಲಾನುಭವಿಗಳನ್ನು ಗುರುತಿಸಲು ಅರ್ಹ ದಂಪತಿಗಳ ದಾಖಲಾತಿ ಪರಿಶೀಲಿಸಿ ಕುಟುಂಬ ಯೋಜನೆಗಳ ಸೇವೆಗಳ ಅಗತ್ಯವಿರುವವರ ಪಟ್ಟಿ ತಯಾರಿಸಬೇಕು ಅವರ ಮುಂದೆ ಸೇವಾ ಸವಲತ್ತು ಪರಿಚಯಿಸಬೇಕು. ಅವರು ಮಾಡಿದ ಆಯ್ಕೆಯ ಸೇವೆಯನ್ನು ನೀಡಬೇಕು ಎಂದರು.

ತರಬೇತಿ ಕಾರ್ಯದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಡಾ. ವಿನಯ್ ರಾಜ್, ಡಾ.ಕವಿತಾ ಪ್ರಶಿಕ್ಷಣಾರ್ಥಿಗಳಿಗೆ ಮಾಹಿತಿ ಶಿಕ್ಷಣ ಒದಗಿಸಿದರು.

ಕಾರ್ಯಕ್ರಮದಲ್ಲಿ ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ್, ಕ್ಷೇತ್ರಆರೋಗ್ಯಶಿಕ್ಷಣಾಧಿಕಾರಿ ಬಿ.ಮೂಗಪ್ಪ, ಕುಟುಂಬ ಯೋಜನೆ ವಿಭಾಗದ ಭವ್ಯ, ಶ್ರೀದೇವಿ ಇದ್ದರು.

### ವೀರಭದ್ರಸ್ವಾಮಿ ಯುವಕರ ಸ್ನೇಹಬಳಗದಿಂದ ಕನ್ನಡ ರಾಜ್ಯೋತ್ಸವ

# ಕನ್ನಡವನ್ನು ಉಳಿಸಿಬೆಳೆಸುವ ಸಂಕಲ್ಪ ನಮ್ಮದಾಗಬೇಕು: ಶಾಸಕ ರಘುಮೂರ್ತಿ

» ಚಳ್ಳಕೆರೆ

ಕರ್ನಾಟಕದಲ್ಲಿ ಕನ್ನಡವೇ ಸಾರ್ವಭೌಮ ಭಾಷೆಯಾಗಿದೆ. ಸಾವಿರಾರು ವರ್ಷಗಳಿಂದ ಕನ್ನಡ ನಾಡಿನ ಜನರಿಗೆ ಬದುಕನ್ನು ಕೊಟ್ಟಜೀವ ಭಾಷೆ ನಾವೆಲ್ಲರೂ ಕಂಕಣಬದ್ದರಾಗಿ ಕನ್ನಡವನ್ನು ಬೆಳೆಸುವ ಸಂಕಲ್ಪವನ್ನು ಮಾಡೋಣವೆಂದು ಕ್ಷೇತ್ರದ ಶಾಸಕ, ಸಣ್ಣಕೈಗಾರಿಕೆ ಅಭಿವೃದ್ದಿ ನಿಗಮ ಅಧ್ಯಕ್ಷ ಟಿ.ರಘುಮೂರ್ತಿ ತಿಳಿಸಿದರು.

ಅವರು, ಶನಿವಾರ ಹಳೇಟೌನ್‌ನ ಶ್ರೀವೀರಭದ್ರಸ್ವಾಮಿ ಯುವಕರ ಸ್ನೇಹಬಳಗ ಹಮ್ಮಿಕೊಂಡಿದ್ದ 10ನೇ ವರ್ಷದ ಕನ್ನಡ ರಾಜ್ಯೋತ್ಸವವನ್ನು ಉದ್ಘಾಟಿಸಿ ಮಾತನಾಡಿದರು. ವೀರಭದ್ರಸ್ವಾಮಿಯುವ ಬಳಗ 10ವರ್ಷಗಳಿಂದ ನಿರಂತರವಾಗಿ ಕನ್ನಡ ಭಾಷೆಯನ್ನು ಮಾಡುತ್ತಾ ಬಂದಿದೆ. ಯುವಕರಲ್ಲಿ ಕನ್ನಡದ ಬಗ್ಗೆ ಸ್ಪೂರ್ತಿ ಸದಾ ಇರಬೇಕು ಎಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಸ್ನೇಹ ಬಳಗದ ಅಧ್ಯಕ್ಷ ಪಿ.ಎಂ.ಪ್ರದೀಪ್‌ಕುಮಾರ್ ಮಾತನಾಡಿ, ಕನ್ನಡ ರಾಜ್ಯೋತ್ಸವ ಕಾರ್ಯಕ್ರಮದ ಮೂಲಕ ನಮ್ಮ ಸಂಘಟನೆ ಇನ್ನೂ ಹಲವಾರು ಸಾಮಾಜಿಕ ಚಟುವಟಿಕೆಗಳನ್ನು ಹಮ್ಮಿಕೊಳ್ಳಲು ಉದ್ದೇಶಿಸಿದೆ. ಎಲ್ಲರೂ ಇದಕ್ಕೆ ಸಹಕಾರ ನೀಡಬೇಕು ಎಂದರು. ಕಾರ್ಯಕ್ರಮದಲ್ಲಿ ನಗರಸಭೆ ಅಧ್ಯಕ್ಷೆ ಜೈತುಂಬಿ, ಉಪಾಧ್ಯಕ್ಷೆ ಸುಜಾತ, ಸದಸ್ಯರಾದ ಬಿ.ಟಿ.ರಮೇಶ್‌ಗೌಡ, ಕೆ.ವೀರಭದ್ರಪ್ಪ, ಹೊಯ್ಸಳಗೋವಿಂದ, ಎಂ.ಜೆ. ರಾಘವೇಂದ್ರ, ಶಿಲ್ಪಮುರುಳೀಧರ, ಶಶಿಧರ, ಎಚ್.ವಿ.ಪ್ರಸನ್ನಕುಮಾರ್, ನಾಗರಾಜು, ಸಿ.ಗುರುಸಿದ್ದಮೂರ್ತಿ, ಕೆ.ಶಿವಕುಮಾರ್, ಶಿವು ಮುಂತಾದವರು ಉಪಸ್ಥಿತರಿದ್ದರು.




### ಇಂಗ್ಲಿಷ್ ವ್ಯಾಮೋಹ ಬಿಟ್ಟು, ಕನ್ನಡ ಮಾಧ್ಯಮದಲ್ಲಿ ಓದಿ: ರಘುಮೂರ್ತಿ



» ಪರಶುರಾಂಪುರ

ಇಂಗ್ಲಿಷ್‌ವ್ಯಾಮೋಹಬಿಟ್ಟು,ಕನ್ನಡಮಾಧ್ಯಮದಲ್ಲಿಓದಿ,ಇತರೆಭಾಷೆಗಳನ್ನ ಕಲಿಯುತ್ತಾ ಮಾತೃ ಭಾಷೆಯ ಹಿರಿಮೆ ಹೆಚ್ಚಿಸಬೇಕುಎಂದುಕ್ಷೇತ್ರದ ಶಾಸಕ ಟಿ.ರಘುಮೂರ್ತಿ ತಿಳಿಸಿದರು. ಗ್ರಾಮದ ಮುಖ್ಯ ವೃತ್ತದಲ್ಲಿ ಶನಿವಾರಕರ್ನಾಟಕರಕ್ಷಣಾ ವೇದಿಕೆಯ ಹೋಬಳಿ ಘಟಕದಿಂದ ಹಮ್ಮಿಕೊಂಡಿದ್ದಕನ್ನಡರಾಜ್ಯೋತ್ಸವಕಾರ್ಯಕ್ರಮವನ್ನುಕನ್ನಡಧ್ವಜವನ್ನು ಹಾರಿಸುವ ಮೂಲಕ ಉದ್ಘಾಟಿಸಿ ಮಾತನಾಡಿದರು.ಭಾಷೆಯ ಬಗ್ಗೆ ಕೀಳಿರಿಮೆ ಬೇಡ.ಕನ್ನಡ ಭಾಷೆಯಲ್ಲೇಕಲಿತವರೂದೊಡ್ಡ ಹುದ್ದೆಗಳಲ್ಲಿ ಇದ್ದವರ ನಿದರ್ಶನಗಳು ಉಂಟು.ಕಲೆ, ಸಂಸ್ಕೃತಿ, ಸಾಹಿತ್ಯ ಸೇರಿದಂತೆ ನಾಡಿನ ಮೆರುಗು ವಿಶ್ವಕ್ಕೆ ಮಾದರಿಆಗಿದೆಎಂದರು. ಕನ್ನಡರಾಜ್ಯೋತ್ಸವದ ದಿನದಂದುತಾಯಿ ಭುವನೇಶ್ವರಿಯ ಭಾವಚಿತ್ರದೊಂದಿಗೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದಜ್ಯೋತಿ ರಾಜ್ಸಾ,ಯಶ್ವಿಕ್‌ರಾಜ್,ಡಾ. ಅಭಿನವ ಸೇರಿದಂತೆಇನ್ನಿತರ ಸಾಧಕರನ್ನುಗೌರವಿಸುವುದುಕಾರ್ಯಕ್ರವ ೧ಕ್ಕೆ ಹೆಚ್ಚು ಮೆರಗು ನೀಡುತ್ತದೆ ಪಿ.ಓ ಪ್ರಕಾಶ್ ತಿಳಿಸಿದರು . ಸಾಹಿತಿ ಶ್ರೀರಾಮ ರೆಡ್ಡಿ ಮಾತನಾಡಿ,ಕನ್ನಡ ಭಾಷೆಗೆ ಸುಮಾರು ವರ್ಷಗಳ ಇತಿಹಾಸವಿದೆ.ಭಾಷೆಯನ್ನ ಉಳಿಸಿ ಬೆಳೆಸಲು ಪ್ರತಿಯೊಬ್ಬಕನ್ನಡಿಗರಿಗೆಜವಾಬ್ದಾರಿಇದೆಎಂದರು. ಕರ್ನಾಟಕರಕ್ಷಣಾ ವೇದಿಕೆಯ ಹೋಬಳಿ ಘಟಕದ ಶ್ರೀನಿವಾಸ ಮಾತನಾಡಿ, ಪ್ರತಿವರ್ಷವೂ ನಮ್ಮ ಸಂಘಟನೆಯಿಂದ ಈ ಕಾರ್ಯಕ್ರಮವನ್ನು ವೈಭವದಿಂದಆಚರಣೆ ಮಾಡಲಾಗುತ್ತದೆ.ಕಳೆದ ಹಲವಾರು ವರ್ಷಗಳಿಂದ ಕನ್ನಡ ಭಾಷೆಯ ಹಿತವನ್ನುರಕ್ಷಿಸುವಲ್ಲಿ ನಮ್ಮ ಸಂಘಟನೆ ಸದಾ ಮುಂದಾಗಿರುತ್ತದೆಎಂದರು.

ರಾಜ್ಯೋತ್ಸವದ ಅಂಗವಾಗಿ ಆರೋಗ್ಯಇಲಾಖೆಯ ಸಹಯೋಗದಲ್ಲಿರಕ್ತದಾನ ಶಿಬಿರವನ್ನ ಏರ್ಪಡಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಗ್ರಾಪಂಅಧ್ಯಕ್ಷಜಗಲೂರು ಸ್ವಾಮಿ, ಉಪಾಧ್ಯಕ್ಷೆ ಸರೋಜಮ್ಮ, ಘಟಕದ ಹೋಬಳಿ ಉಪಾಧ್ಯಕ್ಷ ತಿಪ್ಪೇಶಿ, ಪ್ರಧಾನ ಕಾರ್ಯದರ್ಶಿ ಪಿ.ಓ ಪ್ರಕಾಶ್, ಸೇರಿದಂತೆ ಸದಸ್ಯರಾದರುದ್ರೇಶ್, ಶ್ರೀನಿವಾಸ, ಓಬಳೇಶ, ನಾಗಭೂಷಣ,ರವಿ ಮುಖಂಡರಾದಚೆನ್ನಕೇಶವ, ನಿಜಲಿಂಗಪ್ಪ, ಜಯಕುಮಾರ್,ಜಯವೀರಚಾರಿ,ಡಾ.ಅಭಿನವ,ಡಾ.ಶ್ರೀನಿವಾಸಬಾಬು,ರಮೇಶ್, ಪುನೀತ್,ರಂಜಿತಾ, ಪ್ರಸನ್ನ ಭಾಗವಹಿಸಿದ್ದರು.

# ಬಂಜೆತನ ನಿವಾರಣೆಗೆ ನಿರಂತರ ವೈದ್ಯರ ಸಂಪರ್ಕ ಅಗತ್ಯ: ಡಾ.ನಿತ್ಯ

» ಚಳ್ಳಕೆರೆ

ನಗರದ ರೋಟರಿ ಕ್ಲಬ್‌ನಲ್ಲಿ ರೋಟರಿ ಕ್ಲಬ್ ಮತ್ತು ಇನ್ನರ್‌ವೀಲ್ಡ್ ಸಹಯೋಗದೊಂದಿಗೆ ಉಚಿತ ಬಂಜೆತನ ಸಮಾಲೋಚನಾ ಶಿಬಿರ ನಡೆಸಿ ಹಲವಾರು ಜನರಿಗೆ ಮಾರ್ಗದರ್ಶನ ನೀಡಲಾಯಿತು. ಶಿಬಿರದಲ್ಲಿ ಭಾಗವಹಿಸಿದ್ದ ಡಾ.ನಿತ್ಯ, ಡಾ.ಅರುಣ್ ಮುಂತಾದವರು ಇತ್ತೀಚಿನ ವರ್ಷಗಳಲ್ಲಿ ವಿವಾಹವಾಗಿ ಕೆಲವು ವರ್ಷಗಳ ಕಳೆದ ನಂತರ ಅವಳಲ್ಲಿ ತಾಯಿಲಕ್ಷಣ ಕಾಣದೇ ಇದ್ದಾಗ ಅವಳನ್ನು ಹೀಯಾಳಿಸುವುದು



ಸಾಮಾನ್ಯವಾಗಿದೆ. ಆದರೆ, ತಜ್ಞ ವೈದ್ಯರನ್ನು ಭೇಟಿ ಮಾಡಿ ಮಾರ್ಗದರ್ಶನ ಪಡೆಯಬೇಕಿದೆ. ಬಂಜೆತನದಿಂದ ವಿಮುಕ್ತಿಪಡೆಯಲು ಹಲವಾರು ಮಾರ್ಗಗಳಿದ್ದು, ನಿರಂತರ ವೈದ್ಯರ ಸಂಪರ್ಕ ಹಾಗೂ ಮಾರ್ಗದರ್ಶನ ಪಡೆಯುವಂತೆ ಸಲಹೆ ನೀಡಿದರು. ರೋಟರಿ ಕ್ಲಬ್‌ನ ಹಿರಿಯ ಸದಸ್ಯರಾದ ಡಾ.ಕೆ.ಎಂ.ಜಯಕುಮಾರ್, ಡಾ.ಎಲ್.ಎಸ್.ವೀರೇಶ್, ರೋಟರಿ ಕ್ಲಬ್ ಅಧ್ಯಕ್ಷ ಆರ್.ತಿಪ್ಪೇಸ್ವಾಮಿ, ಮಾಜಿ ಅಧ್ಯಕ್ಷ ಕೆ.ನಾಗೇಶ್, ನಿರ್ದೇಶಕರಾದ ವಿ.ಮುರುಗೇಶ್, ಬಿ.ವಿ.ಕಿರಣ್, ಸಿ.ಸಿದ್ದಾರ್ಥ, ಇನ್ನರ್‌ವೀಲ್ಡ್ ಕ್ಲಬ್ ಅಧ್ಯಕ್ಷೆ ಸುಧಾಪ್ರಹ್ಲಾದ್, ಪದ್ಮನಾಗರಾಜು, ಜಾನಕಿಮಂಜುನಾಥ ಮುಂತಾದವರು ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

# ತಾಳಿಕಟ್ಟೆಯಿಂದ ದೊಗ್ಗನಾಳ್‌ವರೆಗೂ ರಸ್ತೆ ಕಾಮಗಾರಿಗೆ ಚಾಲನೆ

» ಹೊಳಲ್ಕೆರೆ

ಮೊದಲ ಬಾರಿಗೆ ಭರಮಸಾಗರದಲ್ಲಿ ಶಾಸನಾಗಿದ್ದಾಗ ದೇಶಕ್ಕೆ ಸ್ವಾತಂತ್ರ್ಯ ಬಂದು ಇಷ್ಟು ವರ್ಷಗಳಾಗಿದ್ದರೂ ಸಂಚಾರಕ್ಕೆ ಗುಣಮಟ್ಟದ ರಸ್ತೆಯಿಲ್ಲದಿರುವುದನ್ನು ಗಮನಿಸಿ ಎಲ್ಲಾ ಹಳ್ಳಿಗಳಲ್ಲೂ ಸಿಮೆಂಟ್ ರಸ್ತೆ ಮಾಡಿಸಿದ್ದೇನೆ. ಈಗ ಹೊಳಲ್ಕೆರೆ ಕ್ಷೇತ್ರದ 493 ಹಳ್ಳಿಗಳಿಗೆ ಎಲ್ಲಿ ಹೋದರು ಇಂತಹ ಕೆಲಸ ಆಗಿಲ್ಲ ಎನ್ನುವಂತಿಲ್ಲ ಎಂದು ಶಾಸಕ ಡಾ.ಎಂ.ಚಂದ್ರಪ್ಪ ತಿಳಿಸಿದರು.

ತಾಲ್ಲೂಕಿನ ತಾಳಿಕಟ್ಟೆ ಗ್ರಾಮದಿಂದ ದೊಗ್ಗನಾಳ್ ಗ್ರಾಮದವರೆಗೂ ಹತ್ತು ಕೋಟಿ ರೂ.ವೆಚ್ಚದಲ್ಲಿ ಡಾಂಬರ್ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ಹಾಗೂ ತಾಳಿಕಟ್ಟೆ ಗ್ರಾಮದಲ್ಲಿ 2 ಕೋಟಿ ಅರವತ್ತು ಲಕ್ಷ ರೂ.ವೆಚ್ಚದ ಜಲಜೀವನ್ ಮಿಷನ್ ಯೋಜನೆಯಡಿಯಲ್ಲಿ ಮನೆ ಮನೆಗೆ ಕುಡಿಯುವ ನೀರು ಪೂರೈಕೆ ಕಾಮಗಾರಿ ಉದ್ಘಾಟಿಸಿ ಮಾತನಾಡಿದರು.

ಅಧಿಕಾರ ಶಾಶ್ವತವಲ್ಲ. ಇರುವಷ್ಟು ದಿನ ಒಳ್ಳೆ ಕೆಲಸ ಮಾಡಬೇಕೆಂಬ ಇಚ್ಚಾಶಕ್ತಿಯಿಟ್ಟುಕೊಂಡಿರುವ ರಾಜಕಾರಣಿ ನಾನು. ಮೂವತ್ತು ವರ್ಷಗಳ ಹಿಂದೆ ಭರಮಸಾಗರದಿಂದ ಮೊದಲ ಬಾರಿ ನಾನು ಶಾಸಕನಾಗಿದ್ದಾಗ ಸಿದ್ದರಾಮಯ್ಯನವರು ಹಣಕಾಸು ಮಂತ್ರಿಯಾಗಿದ್ದರು. ನಾನೆಂದರೆ ಅವರಿಗೆ ಪಂಚಪ್ರಾಣ. ಅನಿವಾರ್ಯ ಕಾರಣಗಳಿಂದ ನಾನು ಭಾರತೀಯ ಜನತಾಪಕ್ಷ ಸೇರಿದೆ. ಅವರು ಕಾಂಗ್ರೆಸ್‌ಗೆ ಹೋಗಿ ಈಗ ಎರಡನೆ ಬಾರಿಗೆ ರಾಜ್ಯದ ಮುಖ್ಯಮಂತ್ರಿಯಾಗಿದ್ದಾರೆಂದು ಹಿಂದಿನ ನೆನಪುಗಳನ್ನು ಶಾಸಕ ಡಾ.ಎಂ.ಚಂದ್ರಪ್ಪ ಸ್ಮರಿಸಿಕೊಂಡರು.



ಭದ್ರಾ ಪ್ರಾಜೆಕ್ಟ್‌ನಿಂದ ನೀರು ಹರಿಸಿ ತಾಲ್ಲೂಕಿನಾದ್ಯಂತ ಎಲ್ಲಾ ಕೆರೆಗಳನ್ನು ತುಂಬಿಸಿ ರೈತರ ಬದುಕು ಹಸನು ಮಾಡಬೇಕೆಂಬುದು ನನ್ನ ಗುರಿ. ಚಿಕ್ಕಜಾಜೂರಿನ ಕೋಟೆಹಾಳ್ ಬಳಿ ಐದು ನೂರು ಕೋಟಿ ರೂ.ವೆಚ್ಚದಲ್ಲಿ ನಾಲ್ಕುನೂರು ಮೆ.ವ್ಯಾ. ವಿದ್ಯುತ್ ಪವರ್ ಸ್ಟೇಷನ್ ನಿರ್ಮಾಣವಾಗುತ್ತಿದೆ. ಇದರಿಂದ ಇನ್ನು ನೂರು ವರ್ಷಗಳ ಕಾಲ ರೈತರಿಗೆ ವಿದ್ಯುತ್ ಸಮಸ್ಯೆಯಿರುವುದಿಲ್ಲ. ಹಿರಿಯೂರಿನ ವಾಣಿವಿಲಾಸಸಾಗರದಿಂದ ನೀರು ತಂದು ಹೊಳಲ್ಕೆರೆ ತಾಲ್ಲೂಕಿನ ಪ್ರತಿ ಹಳ್ಳಿಗಳಲ್ಲಿ ಮನೆ ಮನೆಗೆ ಶುದ್ದ ಕುಡಿಯುವ ನೀರು ಪೂರೈಸಲು 367 ಕೋಟಿ ರೂ.ಗಳನ್ನು ಖರ್ಚು ಮಾಡಲಾಗುತ್ತಿದೆ ಎಂದು ಹೇಳಿದರು.

ಸಂತ ಶ್ರೇಷ್ಠ ಭಕ್ತ ಕನಕದಾಸನ ಭಕ್ತಿಗೆ ಮೆಚ್ಚಿ ಶ್ರೀಕೃಷ್ಣ ಪರಮಾತ್ಮ ದರ್ಶನ ನೀಡಿದ ಇತಿಹಾಸವಿದೆ. ಜಾತಿ ಪದ್ದತಿಯನ್ನು ಆರುನೂರು ವರ್ಷಗಳ ಹಿಂದೆಯೇ ವಿರೋಧಿಸಿದ ಕನಕದಾಸರ ಆಚಾರ ವಿಚಾರಗಳನ್ನು ಇಂದಿನ ಪೀಳಿಗೆ ತಿಳಿದುಕೊಳ್ಳಬೇಕು. ಕನಕ ಜಯಂತಿಯನ್ನು ಶ್ರದ್ದಾಭಕ್ತಿಯಿಂದ ಆಚರಿಸುವುದೇ ಅವರಿಗೆ ನೀಡುವ ಗೌರವ ಎಂದು ತಿಳಿಸಿದರು.

ತಾಳಿಕಟ್ಟೆ ಗ್ರಾಮದಲ್ಲಿ ಏರ್ಪಡಿಸಲಾಗಿದ್ದ 537 ನೇ ಕನಕ ಜಯಂತಿ ಹಾಗೂ ಕನ್ನಡ ರಾಜ್ಯೋತ್ಸವದ ಸಾನಿಧ್ಯ ವಹಿಸಿದ್ದ ಕಾಗಿನೆಲೆ ಕನಕ ಗುರುಪೀಠದ ಈಶ್ವರಾನಂದಪುರಿ ಸ್ವಾಮೀಜಿ ಆಶೀರ್ವಚನ ನೀಡುತ್ತ ಹಾಲು ಕೆಟ್ಟರು ಕೆಡಬಹುದು. ಹಾಲು ಮತಸ್ಥರು ಎಂದಿಗೂ ಕೆಡುವುದಿಲ್ಲ. ಹಾಲು ಮತ ಧರ್ಮಕ್ಕೆ ಅಂತಹ ಶ್ರೇಷ್ಠತೆಯಿದೆ.

ಕನಕ ಜಯಂತಿಯನ್ನುಶ್ರದ್ಧಾಭಕ್ತಿಯಿಂದ ಆಚರಿಸಬೇಕು. ಡಿ.ಜೆ. ಹಾಕಿಕೊಂಡು ಕುಣಿಯುವುದು, ಮದ್ಯಪಾನ ಸೇವಿಸುವುದು ನಿಜವಾಗಿಯೂ ಕನಕದಾಸರಿಗೆ ಎಸಗುವ ಅಪಚಾರ ಎಂದು ತಾಳಿಕಟ್ಟೆ ಗ್ರಾಮದ ಯುವ ಜನಾಂಗವನ್ನು ಎಚ್ಚರಿಸಿದರು.

600 ವರ್ಷಗಳ ಹಿಂದೆಯೇ ಸಮಾನತೆಯ ಸಂದೇಶ ಸಾರಿದ ಸಂತ ಶ್ರೇಷ್ಠ ಭಕ್ತ ಕನಕದಾಸರು ಕೀರ್ತನೆಯ ಮೂಲಕ ಜಾತಿ ಪದ್ದತಿಯನ್ನು ವಿರೋಧಿಸಿದರು. ಅಂತಹ ಮಹನೀಯರ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸಬೇಕೆಂದು ಕರೆ ನೀಡಿದರು.

ರೇವಣ್ಣಯ್ಯ ಒಡೆಯರ್, ಗುರಯ್ಯ ಒಡೆಯರ್, ಗ್ರಾಮ ಪಂಚಾಯಿತಿ ಅಧ್ಯಕ್ಷ ಟಿ.ಬಸವರಾಜ್, ಜಿಲ್ಲಾ ಪಂಚಾಯಿತಿ ಮಾಜಿ ಉಪಾಧ್ಯಕ್ಷ ಬಿ.ಗಂಗಾಧರ್, ಡಿ.ಸಿ.ಮೋಹನ್, ಕರಿಯಣ್ಣ, ನುಲೇನೂರು ಶೇಖರ್, ಲೋಕೇಶ್, ಚಂದ್ರಪ್ಪ, ಗೋವಿಂದಪ್ಪ, ಗ್ರಾಮ ಪಂಚಾಯಿತಿ ಸದಸ್ಯರು ಹಾಗೂ ತಾಳಿಕಟ್ಟೆ ಗ್ರಾಮಸ್ಥರು ಈ ಸಂದರ್ಭದಲ್ಲಿ ಉಪಸ್ಥಿತರಿದ್ದರು.

**ಫಾಸ್ಟ್ ನ್ಯೂಸ್**

## ಜಿ.ಮಲ್ಲಿಕಾರ್ಜುನಪ್ಪ, ಹಾಲಮ್ಮ ದಂಪತಿಗಳ ಪುಣ್ಯಸ್ಮರಣೆ



» ಚಿತ್ರದುರ್ಗ

ದಾವಣಗೆರೆ ಲೋಕಸಭಾ ಕ್ಷೇತ್ರದ ಮಾಜಿ ಸದಸ್ಯ ಜಿ.ಮಲ್ಲಿಕಾರ್ಜುನಪ್ಪನವರ 21 ನೇ ಹಾಗೂ ಹಾಲಮ್ಮ ಜಿ.ಮಲ್ಲಿಕಾರ್ಜುನಪ್ಪನವರ 18 ನೇ ವರ್ಷದ ಪುಣ್ಯಸ್ಮರಣೆ ಅಂಗವಾಗಿ ಮಠದ ಕುರುಬರಹಟ್ಟಿಯಲ್ಲಿರುವ ಬಸವೇಶ್ವರ ವಿದ್ಯಾಸಂಸ್ಥೆಯಲ್ಲಿ ಶನಿವಾರ ವಿಕಲಚೇತನ ಹಾಗೂ ಅಂಧ ಮಕ್ಕಳಿಂದ ಭಾವಪೂರ್ಣ ಶ್ರದ್ಧಾಂಜಲಿ ಏರ್ಪಡಿಸಲಾಗಿತ್ತು. ಬಸವೇಶ್ವರ ವಿದ್ಯಾಸಂಸ್ಥೆಯ ಕಾರ್ಯದರ್ಶಿ ವಿ.ಕೆ.ಶಂಕರಪ್ಪ ಮಾತನಾಡಿ ಜಿ.ಮಲ್ಲಿಕಾರ್ಜುನಪ್ಪನವರು ನಮ್ಮ ಸಂಸ್ಥೆಯ ಅನಾಥ ಹಾಗೂ ವಿಕಲಚೇತನ ಮಕ್ಕಳಿಗೆ ಸಾಕಷ್ಟು ನೆರವು ನೀಡಿದ್ದಾರೆ. ರಾಜಕಾರಣದಲ್ಲಿ ಅಜಾತ ಶತ್ರುವಾಗಿದ್ದ ಅವರು ನಮ್ಮ ಸಂಸ್ಥೆಯೊಂದಿಗೆ ಒಡನಾಟವಿಟ್ಟುಕೊಂಡಿದ್ದರೆಂದು ಸ್ಮರಿಸಿ ಆತ್ಮಕ್ಕೆ ಚಿರಶಾಂತಿ ಕೋರಿದರು.ಹುಲ್ಲೂರು ಕೃಷ್ಣಪ್ಪ, ಪ್ರಭಾವತಿ ಶಂಕರಪ್ಪ, ಆರ್.ವಿಶ್ವಸಾಗರ್, ಜಾನಪದ ಹಾಡುಗಾರ ಹರೀಶ್ ಇನ್ನು ಅನೇಕರು ಶ್ರದ್ಧಾಂಜಲಿ ಸಮಾರಂಭದಲ್ಲಿ ಹಾಜರಿದ್ದರು.

## ಡಿಸೆಂಬರ್ 3 ರಂದು ವಿಶ್ವ ಏಡ್ಸ್ ದಿನಾಚರಣೆ

» ದಾವಣಗೆರೆ

ನಗರದ ವಿದ್ಯಾನಗರದಲ್ಲಿರುವ ವಿಶ್ವವಿದ್ಯಾನಿಲಯ ದೃಶ್ಯಕಲಾ ಮಹಾವಿದ್ಯಲಯ ಸಭಾಂಗಣದಲ್ಲಿ ಡಿಸೆಂಬರ್ 3 ರಂದು ಬೆಳಗ್ಗೆ 11 ಗಂಟೆಗೆ 'ಹಕ್ಕುಗಳನ್ನು ಪಡೆಯಲು ಸರಿಯಾದ ಮಾರ್ಗ ಅನುಸರಿಸೋಣ: ನನ್ನ ಆರೋಗ್ಯ ನನ್ನ ಹಕ್ಕು ಎಂಬ ಘೋಷ ವಾಕ್ಯದೊಂದಿಗೆ ವಿಶ್ವ ಏಡ್ಸ್ ದಿನ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ.

ಕರ್ನಾಟಕ ರಾಜ್ಯ ಏಡ್ಸ್ ಪ್ರಿವೆನ್ಷನ್ ಸೊಸೈಟಿ, ಬೆಂಗಳೂರು, ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕ, ಸಂಜೀವಿನಿ ಪಾಸಿಟಿವ್ ನೆಟ್ವರ್ಕ್, ಶ್ರೀ ದುರ್ಗಾಶಕ್ತಿ ಏಡ್ಸ್ ತಡೆಗಟ್ಟುವ ಮಹಿಳಾ ಸಂಘ, ಅಭಯ ಸ್ಪಂದನ ಸ್ವಯಂ ಸೇವಾ ಸಂಸ್ಥೆ, ಜೆಪಿಎನ್‌ಜಿಪಿಎಸ್‌ಎಸ್ ಸಂಸ್ಥೆ, ಜಿಲ್ಲೆಯ ಎಲ್ಲಾ ರಕ್ತನಿಧಿ ಕೇಂದ್ರಗಳು, ಜಿಲ್ಲಾ ಆರ್.ಆರ್.ಸಿ ಕಾಲೇಜು, ಎನ್.ಸಿ.ಸಿ. ಮತ್ತು ಎನ್.ಎಸ್.ಎಸ್, ಘಟಕ, ಜಿಲ್ಲಾ ಎನ್.ವೈ.ಕೆ ಶಿಕ್ಷಣ ಇಲಾಖೆ, ವಿಶ್ವವಿದ್ಯಾನಿಲಯ ದೃಶ್ಯಕಲಾ ಮಹಾವಿದ್ಯಾನಿಲಯ ಇವರ ಸಹಯೋಗದೊಂದಿಗೆ ಆಯೋಜಿಸಲಾದ ಕಾರ್ಯಕ್ರಮವನ್ನು ಜಿಲ್ಲಾಧಿಕಾರಿಗಳಾದ ಗಂಗಾಧರಸ್ವಾಮಿ.ಜಿ.ಎಂ ಉದ್ಘಾಟಿಸುವರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಷಣ್ಮುಖಪ್ಪ.ಎಸ್ ಅಧ್ಯಕ್ಷತೆ ವಹಿಸುವರು. ಜಾಥಾ: ಬೆಳಗ್ಗೆ 9 ಗಂಟೆಗೆ ಚಿಗಟೇರಿ ಜಿಲ್ಲಾ ಆಸ್ಪತ್ರೆ ಮುಂಭಾಗದಿಂದ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಸುರೇಶ್.ಬಿ. ಇಟ್ನಾಳ್ ಜಾಥಾ ಕಾರ್ಯಕ್ರಮಕ್ಕೆ ಚಾಲನೆ ನೀಡುವರು.

ಮುಖ್ಯ ಅತಿಥಿಗಳಾಗಿ ಜಿಲ್ಲಾ ಕಾನೂನು ಸೇವಾ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಮಹಾವೀರ ಮ.ಕರೆಣ್ಣನವರ್, ಚಿಗಟೇರಿ ಜಿಲ್ಲಾ ಆಸ್ಪತ್ರೆ ಅಧೀಕ್ಷಕ ಡಾ. ನಾಗೇಂದ್ರಪ್ಪ ಎನ್.ಬಿ, ಮಹಿಳಾ ಮತ್ತು ಮಕ್ಕಳ ಆಸ್ಪತ್ರೆ ಅಧೀಕ್ಷಕ ಡಾ. ಮಧು ಎಸ್.ಪಿ, ಜಿಲ್ಲಾ ಏಡ್ಸ್ ಪ್ರತಿಬಂಧಕ ಮತ್ತು ನಿಯಂತ್ರಣ ಘಟಕದ ಜಿಲ್ಲಾ ಕಾರ್ಯಕ್ರಮ ಅಧಿಕಾರಿ ಡಾ. ಡಿ.ಪಿ ಮುರಳೀಧರ, ವಿಶ್ವವಿದ್ಯಾನಿಲಯ ದೃಶ್ಯ ಕಲಾಮಹಾವಿದ್ಯಾಲಯದ ಪ್ರಾಚಾರ್ಯರಾದ ಡಾ.ಜೈರಾಜ.ಎಂ.ಚಿಕ್ಕಪಾಟೀಲ, ವಿಶ್ವವಿದ್ಯಾನಿಲಯ ದೃಶ್ಯ ಕಲಾಮಹಾವಿದ್ಯಾಲಯ ಎನ್.ಎಸ್.ಎಸ್. ಘಟಕದ ಕಾರ್ಯಕ್ರಮ ಅಧಿಕಾರಿ ಡಾ.ಸತೀಶಕುಮಾರ.ಪಿ.ಮಲ್ಲಪುರೆ, ಎ.ಆರ್.ಟಿ ಪ್ಲಸ್ ಕೇಂದ್ರದ ನೋಡಲ್ ಅಧಿಕಾರಿ ಡಾ. ಜಿ ಶಿವರಾಜ, ತಾಲ್ಲೂಕು ಆರೋಗ್ಯಾಧಿಕಾರಿ ಡಾ. ದೇವರಾಜ್.ಪಿ ಪಟಿಗೆ, ಚಿಗಟೇರಿ ಜಿಲ್ಲಾ ಆಸ್ಪತ್ರೆ ರಕ್ತ ಕೇಂದ್ರದ ವೈದ್ಯಾಧಿಕಾರಿ ಡಾ. ಗೀತಾ ಡಿ.ಹೆಚ್, ಜಿಲ್ಲಾ ಆರೋಗ್ಯ ಶಿಕ್ಷಣ ಅಧಿಕಾರಿ ಡಾ.ಸುರೇಶ್. ಎನ್.ಬಾರ್ಕಿ ಉಪಸ್ಥಿತರಿವರು. ಕ್ಯಾಂಡಲ್ ಲೈಟ್ ಸ್ಮರಣ ಕಾರ್ಯಕ್ರಮ: ಸಂಜೆ 6 ಗಂಟೆಗೆ ನಗರದ ಗಾಂಧಿ ವೃತ್ತದಬಳಿ ಕ್ಯಾಂಡಲ್ ಲೈಟ್ ಸ್ಮರಣ ಕಾರ್ಯಕ್ರಮವನ್ನು ಏರ್ಪಡಿಸಲಾಗಿದ್ದು, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ. ಷಣ್ಮುಖಪ್ಪ ಉದ್ಘಾಟಿಸುವರು ಚನ್ನಗಿರಿ ತಾಲ್ಲೂಕಿನ ತಿಪ್ಪಗೊಂಡನಹಳ್ಳಿ ಸುವರ್ಣ ಕರ್ನಾಟಕ ಜನಜಾಗೃತಿ ಕಲಾ ಸಂಘ ಮತ್ತು ನರಶೆಟ್ಟಿಹಳ್ಳಿಯ ಪಯಣ ಸಾಮಾಜಿಕ, ಶೈಕ್ಷಣಿಕ ಸಂಸ್ಥೆಯವರು ಜಾನಪದ ಕಲಾ ಪ್ರದರ್ಶನ ನಡೆಸುವರು.

## ಕೃಷಿಕ ಸಮಾಜ ಚುನಾವಣೆ

» ದಾವಣಗೆರೆ

ಜಿಲ್ಲೆಯ ವಿವಿಧ ತಾಲ್ಲೂಕಿನ ಕೃಷಿಕ ಸಮಾಜದ ಚುನಾವಣೆಯು ಡಿಸೆಂಬರ್ 15 ರಂದು ಬೆಳಿಗ್ಗೆ 8 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ಚುನಾವಣಾ ಪ್ರಕ್ರಿಯೆಯನ್ನು ಸಹಾಯಕ ಕೃಷಿ ನಿರ್ದೇಶಕರ ಕಚೇರಿ ದಾವಣಗೆರೆ, ಹಾಗೂ ರೈತ ಸಂಪರ್ಕ ಕೇಂದ್ರ ನ್ಯಾಮತಿ ಈ ಸ್ಥಳಗಳಲ್ಲಿ ನಿಗಧಿಪಡಿಸಿಲು ಆದೇಶ ಹೊರಡಿಸಿದ್ದಾರೆ.

# ಸುಪ್ರೀಂ ತೀರ್ಪಿನಂತೆ ಒಳ ಮೀಸಲಾತಿ ಜಾರಿಗೊಳಿಸದಿದ್ದರೆ ಜನಪ್ರತಿನಿಧಿಗಳಿಗೆ ಪ್ರತಿ ಜಿಲ್ಲೆಯಲ್ಲಿ ಘೇರಾವ್ ಹಾಕಬೇಕು

» ಚಿತ್ರದುರ್ಗ

ಸುಪ್ರಿಂಕೋರ್ಟ್ ತೀರ್ಪಿನಂತೆ ಒಳ ಮೀಸಲಾತಿಯನ್ನು ಜಾರಿಗೊಳಿಸದಿದ್ದರೆ ಜನಪ್ರತಿನಿಧಿಗಳು ಯಾರೆ ಬರಲಿ ಪ್ರತಿ ಜಿಲ್ಲೆಯಲ್ಲಿ ಘೇರಾವ್ ಹಾಕಬೇಕೆಂದು ವಿಶ್ರಾಂತ ಹಿರಿಯ ಪ್ರಾಧ್ಯಾಪಕ ಗುಲ್ಬರ್ಗದ ಎಂ.ಟಿ.ಕಟ್ಟಿಮನಿ ಕರೆ ನೀಡಿದರು.



ಕರ್ನಾಟಕ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಗಳ ನೌಕರರ ಒಕ್ಕೂಟ, ತುಮಕೂರು ರಾಜ್ಯ ಸಮಿತಿಯಿಂದ ಕ್ರೀಡಾ ಭವನದಲ್ಲಿ ಭಾನುವಾರ ಹಮ್ಮಿಕೊಳ್ಳಲಾಗಿದ್ದ ಒಳ ಮೀಸಲಾತಿ ಕುರಿತ ರಾಜ್ಯ ಮಟ್ಟದ ವಿಚಾರ ಸಂಕಿರಣದಲ್ಲಿ ಬುದ್ದ, ಅಂಬೇಡ್ಕರ್, ಪ್ರೊ.ಬಿ.ಕೃಷ್ಣಪ್ಪ, ಪೆರಿಯಾರ್ ಇವರುಗಳ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡಿದರು.

ಅನೇಕ ನಿಂದನೆ, ಅಪಹಾಸ್ಯ, ನೋವು, ಹಿಂಸೆ,ಅವಮಾನಅನುಭವಿಸಿಡಾ.ಬಿ.ಆರ್. ಅಂಬೇಡ್ಕರ್ ದೇಶಕ್ಕೆ ಸಂವಿಧಾನವನ್ನು ಕೊಡುಗೆಯಾಗಿ ನೀಡಿದ್ದಾರೆ. ಸಂವಿಧಾನದ ಆಶಯ ಈಡೇರಬೇಕಾದರೆ ಸರ್ಕಾರ ಒಳ ಮೀಸಲಾತಿಯನ್ನು ತಕ್ಷಣವೆ ಅನುಷ್ಠಾನಗೊಳಿಸಬೇಕು. ಒಳ ಮೀಸಲಾತಿ ಜಾರಿಗಾಗಿ ಏಕ ಸದಸ್ಯ ಆಯೋಗ ನೇಮಕವಾಗಿದ್ದರು. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ಜಾರಿಗೊಳಿಸುವ ಬದಲು ಮಲ್ಲಿಕಾರ್ಜುನ ಖರ್ಗೆರವರ ಕಡೆ ಕೈಮಾಡಿ ತೋರಿಸುತ್ತ ಜವಾಬ್ದಾರಿಯಿಂದ ನುಣುಚಿಕೊಳ್ಳುವ ಜಾಣ ನಡೆ ಪ್ರದರ್ಶಿಸುತ್ತಿದ್ದಾರೆ. ನಮ್ಮ ಸಮುದಾಯ ಇನ್ನು ಮೈಮರೆತು ಕೂರುವುದರಲ್ಲಿ ಅರ್ಥವಿಲ್ಲ ಎಂದು ಎಚ್ಚರಿಸಿದರು.

36 ಸಾವಿರ ವಿವಿಧ ಹುದ್ದೆಗಳ ನೇಮಕಾತಿಗೆ ಈಗಾಗಲೆ ನೋಟಿಫಿಕೇಷನ್ ಹೊರಡಿಸಲಾಗಿದೆ. ಒಳ ಮೀಸಲಾತಿ ಜಾರಿಯಾಗುವತನಕ ಎಲ್ಲಾ ನೇಮಕಾತಿಗಳನ್ನು ತಡೆಹಿಡಿಯಬೇಕು. ನಮ್ಮ ಸಮುದಾಯದ ಮುಖಂಡರು ಸಿದ್ದರಾಮಯ್ಯನವರ ಬಳಿ ಹೋಗಿ ಒಳ ಮೀಸಲಾತಿ ಜಾರಿಗೊಳಿಸಿ ಎಂದು ಬೇಡುತ್ತಿರುವುದನ್ನು ಬಿಟ್ಟರೆ ಪರಿಣಾಮಕಾರಿಯಾಗಿ ಏನು ಮಾಡಬೇಕು ಎನ್ನುವುದರ ಬಗ್ಗೆ ಯಾರು ಚಿಂತಿಸುತ್ತಿಲ್ಲದಿರುವುದೇ ನೋವಿನ ಸಂಗತಿ ಎಂದು ಬೇಸರ ವ್ಯಕ್ತಪಡಿಸಿದರು.

ಸಾಮಾಜಿಕ ಸಂಘರ್ಷ ಸಮಿತಿ ರಾಜ್ಯ ಗೌರವಾಧ್ಯಕ್ಷ ಡಿ.ದುರುಗೇಶಪ್ಪ ಮಾತನಾಡುತ್ತ ಮೂವತ್ತು ವರ್ಷಗಳ ಹಿಂದೆ ಪ್ರೊ.ಬಿ.ಕೃಷ್ಣಪ್ಪ ನಾಯಕತ್ವದಲ್ಲಿ ಒಳ ಮೀಸಲಾತಿಗಾಗಿ ಹೋರಾಟ ಆರಂಭಿಸಲಾಯಿತು. ಅಂದಿನಿಂದ ಇಂದಿನವರೆಗೂ ಚಳುವಳಿ, ಪ್ರತಿಭಟನೆ, ಹೋರಾಟಗಳು ನಡೆಯುತ್ತಲಿದೆ. ಆದರೆ ಪ್ರತಿಫಲ ಇನ್ನು ಯಾರಿಗೂ ಸಿಕ್ಕಿಲ್ಲ. ಒಳ ಮೀಸಲಾತಿ ಜಾರಿಗೊಳಿಸುವ ಅಧಿಕಾರ ಆಯಾ ರಾಜ್ಯ ಸರ್ಕಾರಗಳಿಗಿದೆಯೆಂದು ಸುಪ್ರೀಂಕೋರ್ಟ್ ತೀರ್ಪು ನೀಡಿದ್ದರೂ ಸಹ ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರು ನಮ್ಮ ಸಮುದಾಯವನ್ನು ಇನ್ನು ಯಾಮಾರಿಸುತ್ತಲೆ ಬರುತ್ತಿರುವುದರ ವಿರುದ್ದ ಜಾಗೃತರಾಗಬೇಕೆಂದು ತಿಳಿಸಿದರು. ಮಾದಿಗರಿಗೆ ಶೇ.6, ಒಲೆಯರಿಗೆ ಶೇ.5 ಹಾಗೂ ಇತರರಿಗೆ ಶೇ.3 ಪರ್ಸೆಂಟ್ ಮೀಸಲಾತಿ ನೀಡಬೇಕೆಂಬ ಕೂಗು ಕೇಳಿ ಬರುತ್ತಿದೆ. ರಾಜಕಾರಣಿಗಳನ್ನು ನಂಬಿಕೊಂಡು ನೌಕರ ವರ್ಗದವರಿಗೆ ಅನ್ಯಾಯ ಮಾಡಿದಂತಾಗಿದೆ. ಯಾವ ಅನುಕೂಲವನ್ನು ಪಡೆದಿಲ್ಲ. ಎಂದು ಹೇಳಿದರು.

ವಿಜಯನಗರದ ಗ್ಯಾನಪ್ಪ ಬಡಿಗೇರ್ ಮಾತನಾಡಿ ಒಳ ಮೀಸಲಾತಿಗಾಗಿ 35 ವರ್ಷಗಳಿಂದಲೂ ಹೋರಾಟ ಮಾಡಲಾಗುತ್ತಿದೆ.ಇನ್ನುಅನುಷ್ಠಾನವಾಗಿಲ್ಲ. ಒಳ ಮೀಸಲಾತಿ ಜಾರಿಗೆ ಬರುವತನಕ ಸೂಕ್ತ ಸ್ಥಾನಮಾನ ಸಿಗುವುದಿಲ್ಲ. ಸುಪ್ರೀಂಕೋರ್ಟ್ ತೀರ್ಪಿನಂತೆ ಒಳ ಮೀಸಲಾತಿ ಜಾರಿಯಾದರೆ ಆಯಾ ಜನಸಂಖ್ಯೆಗನುಗುಣವಾಗಿ ಪಾಲು ಸಿಗುತ್ತದೆ. ಯಾರ ಹಕ್ಕನ್ನು ಯಾರು ಕಸಿದುಕೊಳ್ಳುವುದಿಲ್ಲ. ಜಾತಿ ಅಭಿಮಾನ ಮೂಡಿಸಿಕೊಂಡು ಸಂಘಟಿತರಾಗದಿದ್ದರೆ ಆಳುವ ಸರ್ಕಾರಗಳು ನಮ್ಮ ಕಡೆಗಣಿಸುತ್ತಲೆ ಬರುತ್ತವೆ ಎಂದರು.

ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗಗಳ ನೌಕರರ ಒಕ್ಕೂಟದ ರಾಜ್ಯಾಧ್ಯಕ್ಷ ಹಿರೇಹಳ್ಳಿ ಮಲ್ಲಿಕಾರ್ಜುನ್ ಅಧ್ಯಕ್ಷತೆ ವಹಿಸಿದ್ದರು.

ಉಪನ್ಯಾಸಕ ರಾಮಣ್ಣ, ಭೀಮಾಶಂಕರ್ ಐ.ಆರ್.ಎಸ್. ಇವರುಗಳು ವೇದಿಕೆಯಲ್ಲಿದ್ದರು.

# ಭೌತಿಕ ಹಾಗೂ ಬೌದ್ಧಿಕ ಕಸರತ್ತಿನ ಮೂಲಕ ಅನೇಕ ಕ್ರೀಡೆಗಳು ನಡೆಯುತ್ತವೆ: ಸ್ವಾಮೀಜಿ

» ಚಿತ್ರದುರ್ಗ

ಭೌತಿಕ ಹಾಗೂ ಬೌದ್ಧಿಕ ಕಸರತ್ತಿನ ಮೂಲಕ ಅನೇಕ ಕ್ರೀಡೆಗಳು ನಡೆಯುತ್ತವೆ. ಅದರಲ್ಲಿ ಪ್ರಮುಖವಾಗಿ ಬುದ್ಧಿ ಮತ್ತೆಯ ಅರ್ಥಾತ್ ಮೆದುಳಿನ ಮೂಲಕ ನಡೆಯುವ ಆಟ ಎಂದೇ ಪ್ರಖ್ಯಾತಿ ಹೊಂದಿರುವ ಚೆಸ್ (ಚದುರಂಗ ) ಅದೂ ಒಂದಾಗಿದೆ.ಇದು ಪಠ್ಯಕ್ಕೂ ಸಹಕಾರಿ. ಕಾರಣ ಈ ಆಟದಲ್ಲಿ ಏಕಾಗ್ರತೆ ಪ್ರಾಪ್ತವಾಗುತ್ತದೆ. ಅಧ್ಯಯನಕ್ಕೆ ತುಂಬಾ ಸಹಕಾರಿ ಎಂದೇ ಹೇಳಬಹುದಾಗಿದೆ ಎಂದು ಶಿವಶರಣ ಮಾದಾರ ಚೆನ್ನಯ್ಯ ಗುರುಪೀಠದ ಬಸವಮೂರ್ತಿ ಮಾದಾರ ಚೆನ್ನಯ್ಯ ಸ್ವಾಮೀಜಿಯವರು ಅಭಿಪ್ರಾಯಪಟ್ಟರು.



ಶ್ರೀಗಳವರು ನಗರದ ಎಸ್ ಜೆ ಎಂ ವಿದ್ಯಾಪೀಠದ ಆಶ್ರಯದಲ್ಲಿ ನಡೆಯುತ್ತಿರುವ ಎಸ್‌ಜೆಎಂ ಕಾನೂನು ಮಹಾವಿದ್ಯಾಲಯ, ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯ, ಹುಬ್ಬಳ್ಳಿ ಇವರುಗಳ ಆಶ್ರಯದಲ್ಲಿ ಕರ್ನಾಟಕ ರಾಜ್ಯ ಕಾನೂನು ವಿಶ್ವವಿದ್ಯಾಲಯದ ಅಂತರ್ ಮಹಾವಿದ್ಯಾಲಯಗಳ ಪುರುಷ ಮತ್ತು ಮಹಿಳೆಯರ ಚೆಸ್ ಪಂದ್ಯಾವಳಿ ಹಾಗೂ ಆಯ್ಕೆ ಪ್ರಕ್ರಿಯೆ '2024ರ ಪಂದ್ಯಾವಳಿಯ ಉದ್ಘಾಟನಾ ಸಮಾರಂಭದ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳವರು ವಿಶ್ವ ಮಾನ್ಯವಾಗಿರುವ ಈ ಕ್ರೀಡೆ ಗ್ರಾಮೀಣ ಕಡೆಗೂ ಹೋಗಬೇಕಿದೆ. ಆ ಭಾಗದ ಮಕ್ಕಳಲ್ಲಿನ ಬುದ್ಧಿಶಕ್ತಿ ವಿಕಾಸಕೊಳ್ಳಬೇಕಾಗಿದೆ. ಆ ಭಾಗದ ಜನರು ಹಿಂದೆ ಅಂದರೆ ಕಲವೇ ವರ್ಷಗಳ ಹಿಂದಿನವರೆಗೂ ತಮ್ಮ ಬಿಡುವಿನ ವೇಳೆಯಲ್ಲಿ ಇಂತಹ ಅನೇಕ ವಿಭಿನ್ನವಾದ ಆಟಗಳನ್ನು ಆಡುತ್ತಿದ್ದನ್ನು ನಾವು ನೋಡಿದ್ದೇವೆ .ಈಗಿನ ಆಧುನಿಕ ಬರಾಟೆಯಲ್ಲಿ ಅವುಗಳ ಸುಳಿವು ಇಲ್ಲದಂತಾಗಿದೆ. ಬುದ್ಧಿಶಕ್ತಿ ಹೆಚ್ಚಿಸುವಂತಹ ಗ್ರಾಮೀಣ ಕ್ರೀಡೆಗಳು ನಗರ ಪಟ್ಟಣ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಮತ್ತೆ ಚಾಲ್ತಿಗೆ ಬರಬೇಕಾಗಿದೆ.

ನಶಿಸುತ್ತಿರುವ ಈ ಕ್ರೀಡೆಗಳಿಗೆ ಉತ್ತೇಜಿಸುವ ,ಪ್ರೋತ್ಸಾಹ ನೀಡುವಂತಾಗಬೇಕಿದೆ ಎಂದು ಶ್ರೀಗಳವರು ನುಡಿದರು.

ನೇತೃತ್ವ ವಹಿಸಿದ್ದ ಶ್ರೀ ಜಗದ್ಗುರು ಮುರುಘರಾಜೇಂದ್ರ ಬೃಹನ್ಮಠ ಹಾಗೂ ಎಸ್.ಜೆ.ಎಂ ವಿದ್ಯಾಪೀಠದ ಆಡಳಿತ ಮಂಡಳಿಯ ಸದಸ್ಯರಾದ ಡಾ ಬಸವಕುಮಾರ ಸ್ವಾಮಿಗಳು ಮಾತನಾಡಿ ಹಿಂದೆ ಈ ಆಟ ರಾಜ ಮಹಾರಾಜರುಗಳಿಗೆ ಸೀಮಿತವಾಗಿತ್ತು ಎಂದು ಹೇಳುತ್ತಿದ್ದದ್ದು, ಇದೀಗ ಎಲ್ಲಾ ಕಡೆ ಪಸರಿಸುತ್ತಿರುವುದು ಸಹ ಆಶಾದಾಯಕ. ಮನುಷ್ಯರ ಜೀವನದಲ್ಲಿ ಕಲೆ,ಕ್ರೀಡೆ,ಸಂಗೀತ ಮನರಂಜನೆ ಎಲ್ಲವೂ ಬೇಕಾಗಿದೆ.

ವಿದ್ಯಾರ್ಥಿ ಜೀವನದಲ್ಲಿ ಇವುಗಳನ್ನು ರೂಡಿಸಿಕೊಂಡು ಮುನ್ನಡೆಯಬೇಕೆಂದು ಹಿತ ನುಡಿದರು.ಈ ಸಮಾರಂಭದಲ್ಲಿ ವಕೀಲರಾದ ಉಮೇಶ, ಪ್ರಾಧ್ಯಾಪಕರುಗಳಾದ ಕೆ.ಎನ್. ವಿಶ್ವನಾಥ್, ಸುಮನಾ ಅಂಗಡಿ, ಟಿ.ಎಸ್. ಗಿರೀಶ್, ಅಂಬಿಕಾ, ಗುರುಪ್ರಸಾದ್, ಸ್ಮಿತಾ, ಶ್ವೇತಾ , ದೈಹಿಕ ನಿರ್ದೇಶಕರಾದ ಕುಮಾರಸ್ವಾಮಿ ಮತ್ತಿತರರು ಉಪಸ್ಥಿತರಿದ್ದರು. ನಿಹಾರಿಕಾ ಹಾಗು ಭವನ ಪ್ರಾರ್ಥಿಸಿದರು. ಪ್ರಾಚಾರ್ಯರಾದ ಎಸ್. ದಿನೇಶ್ ಸ್ವಾಗತಿಸಿದರು. ರೂಪಾ ನಾಯಕ ಕಾರ್ಯಕ್ರಮ ನಿರ್ವಹಿಸಿದರು, ಲೋಕೇಶ್ ರೆಡ್ಡಿ ವಂದಿಸಿದರು.

## ಕನ್ನಡ ಬೆಳವಣಿಗೆ ಮನೆಯಿಂದಲೇ ಆಗಲಿ: ಬಸವಂತಪ್ಪ ಕಿವಿಮಾತು



» ದಾವಣಗೆರೆ

ಕನ್ನಡ ಬೆಳವಣಿಗೆ ಮನೆಯಿಂದಲೇ ಬೆಳೆಯಬೇಕು. ಆಗ ಮಾತ್ರ ಕನ್ನಡ ಭಾಷೆ ಜೀವಂತವಾಗಿ ಉಳಿಯುತ್ತದೆ ಎಂದು ಶಾಸಕ ಕೆ.ಎಸ್.ಬಸವಂತಪ್ಪ ಕಿವಿಮಾತು ಹೇಳಿದರು.ಮಾಯಕೊಂಡ ಕ್ಷೇತ್ರದ ವ್ಯಾಪ್ತಿಯ ದಾಗಿನಕಟ್ಟೆ ಗ್ರಾಮದಲ್ಲಿ ಕನ್ನಡ ಜಾಗೃತಿ ಕ್ರೀಡಾ ಸಾಂಸ್ಕೃತಿಕ ಸಂಘದ ವತಿಯಿಂದ ಆಯೋಜಿಸಿದ್ದ 69ನೇ ಕನ್ನಡ ರಾಜ್ಯೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.ಪ್ರತಿಯೊಬ್ಬರೂ ಭಾಷಾಭಿಮಾನ ಬೆಳೆಸಿಕೊಳ್ಳಬೇಕು. ಇಂಗ್ಲಿಷ್ ಸಹ ಬೇಕು. ಆದರೆ ಕನ್ನಡವನ್ನು ಚನ್ನಾಗಿ ಕಲಿಯಬೇಕು. ಉಚ್ಚರಣೆ ತಪ್ಪಾಗಿ ಮಾಡಬಾರದು. ಭಾಷಣದಿಂದ ಕನ್ನಡ ಉದ್ಧಾರ ಆಗುವುದಿಲ್ಲ. ಕನ್ನಡ ಬಳಕೆಯನ್ನು ಮಾಡುವುದರಿಂದ, ಬರೆಯುವುದರಿಂದ ಮಾತ್ರವೇ ಉಳಿಸಲು ಸಾಧ್ಯ ಎಂದು ಸಲಹೆ ನೀಡಿದರು.ಮನೆಯಲ್ಲಿ ಮಾತೃಭಾಷೆ ಯಾವುದೇ ಇರಲಿ ಮಕ್ಕಳಿಗೆ ಕನ್ನಡ ಕಲಿಸಬೇಕು. ಮಕ್ಕಳಿಗೆ ಕನ್ನಡ ಪುಸ್ತಕ ಓದುವ ಹವ್ಯಾಸ ಬೆಳೆಸಬೇಕು. ಪುಸ್ತಕ ಓದುವುದರಿಂದಲೇ ಕನ್ನಡ ಬೆಳೆಯುತ್ತದೆ ಎಂದರು. ಕಾರ್ಯಕ್ರಮದಲ್ಲಿ ಬಸವಾಪಟ್ಟಣ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಸಹ ಪ್ರಾಧ್ಯಾಪಕ ಡಾ.ಎಂ.ಆರ್.ಲೋಕೇಶ್, ಕನ್ನಡ ಜಾಗೃತಿ ಸಂಘದ ಅಧ್ಯಕ್ಷ ಟಿ.ಸಿ.ಉಮೇಶ್, ಹೊದಿಗೆರೆ ರಮೇಶ್, ಕರಿಯಪ್ಪ ಮಾಳಗಿ, ಗಂಗಮ್ಮ, ಮಂಜಪ್ಪ, ಲಕ್ಷ್ಮೀಕುಮಾರ್, ಸುಜಾತ ನಾಗರಾಜ್, ಸಂತೋಷ್, ಬಿ.ಎಚ್.ಮಹೇಶ್ವರಪ್ಪ, ಕಾಂಗ್ರೆಸ್ ಮುಖಂಡರು ಹಾಗೂ ಗ್ರಾಮಸ್ಥರು ಭಾಗವಹಿಸಿದ್ದರು. ಬಳಿಕ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆದವು.

## ಡಿ.02ರಂದು ಪ್ರಗತಿ ಪರಿಶೀಲನಾ ಸಭೆ

**ಚಿತ್ರದುರ್ಗ:** ಚಿತ್ರದುರ್ಗ ತಾಲ್ಲೂಕು ಪಂಚಾಯಿತಿ ಸಭಾಂಗಣದಲ್ಲಿ ಡಿಸೆಂಬರ್ 02ರಂದು ಮಧ್ಯಾಹ್ನ 3ಕ್ಕೆ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ ಅಧ್ಯಕ್ಷತೆಯಲ್ಲಿ ತುರುವನೂರು ಹೋಬಳಿ ವ್ಯಾಪ್ತಿಗೆ ಸಂಬಂಧಿಸಿದಂತೆ ಪ್ರಗತಿ ಪರಿಶೀಲನಾ ಸಭೆ ಆಯೋಜಿಸಲಾಗಿದೆ. ತಾಲ್ಲೂಕು ಮಟ್ಟದ ಅಧಿಕಾರಿಗಳು ಹಾಗೂ ತುರುವನೂರು ಹೋಬಳಿಯ ಆರು ಗ್ರಾಮ ಪಂಚಾಯಿತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಕಡ್ಡಾಯವಾಗಿ ಸಭೆಗೆ ಹಾಜರಾಗಬೇಕು ಎಂದು ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ತಿಳಿಸಿದ್ದಾರೆ.

## ಬೋಧಕರ ಹುದ್ದೆಗಳ ನೇಮಕಾತಿಗೆ ಅರ್ಜಿ

**ಚಿತ್ರದುರ್ಗ:** ಚಿತ್ರದುರ್ಗ ವೈದ್ಯಕೀಯ ಮಹಾ ವಿದ್ಯಾಲಯ ಮತ್ತು ಸಂಶೋಧನಾ ಸಂಸ್ಥೆಯಲ್ಲಿ ವಿವಿಧ ವಿಭಾಗಗಳಲ್ಲಿ ಬೋಧಕರ ಹುದ್ದೆಗಳನ್ನು ತಾತ್ಕಾಲಿಕ ಆಧಾರದ ಮೇಲೆ ನೇಮಕಾತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಮಾಹಿತಿಗೆ http://cmcrichitradurga.karnataka.gov.in ನಲ್ಲಿ ಪಡೆಯಬಹುದಾಗಿದೆ.

**ಪ್ರಮುಖ ಸುದ್ದಿ**

### ತಾಲ್ಲೂಕು ಉಸ್ತುವಾರಿ, ಪರಿಶಿಷ್ಟ ವರ್ಗಗಳ ಇಲಾಖೆ ನಿರ್ದೇಶಕ ಟಿ.ಯೋಗೇಶ್‌ರಿಂದ ಪ್ರಗತಿ ಪರಿಶೀಲನಾ ಸಭೆ

# ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಬಿಸಿ ಮುಟ್ಟಿಸಿದ ಅಧಿಕಾರಿ

» ಚಳ್ಳಕೆರೆ

ಸರ್ಕಾರದ ಕೆಲಸ ದೇವರ ಕೆಲಸವೆಂಬ ಘೋಷವಾಕ್ಯವನ್ನು ನಾವೆಲ್ಲರೂ ಪ್ರತಿನಿತ್ಯ ನೆನಪಿಸಿಕೊಳ್ಳಬೇಕು. ಸರ್ಕಾರದ ಸೇವಕರು ಜನಸೇವಕರಾಗಿ ಕಾರ್ಯನಿರ್ವಹಿಸಿದಲ್ಲಿ ಮಾತ್ರ ನಿಮಗೂ ಹಾಗೂ ಇಲಾಖೆಗೂ ಗೌರವ. ಯಾವುದೇ ಅಧಿಕಾರಿ, ಸಿಬ್ಬಂದಿಯಾಗಲಿ ನಿಯಮಬಾಹಿರ ಚಟುವಟಿಕೆಯಲ್ಲಿ ತೊಡಗಿದರೆ, ಅನಗತ್ಯ ಸುಳ್ಳು ಮಾಹಿತಿ ನೀಡಿದವರ ವಿರುದ್ದ ಕೈಗೊಳ್ಳಲು ಹಿರಿಯ ಅಧಿಕಾರಿಗಳಿಗೆ ಶಿಫಾರಸ್ಸು ಮಾಡಲು ಹಿಂಜರಿಯುವುದಿಲ್ಲವೆಂಬ ಎಚ್ಚರಿಕೆಯನ್ನು ತಾಲ್ಲೂಕು ಉಸ್ತುವಾರಿ ಅಧಿಕಾರಿ ಹಾಗೂ ಪರಿಶಿಷ್ಟ ವರ್ಗಗಳ ಇಲಾಖೆ ನಿರ್ದೇಶಕ ಟಿ.ಯೋಗೇಶ್ ನೀಡಿದರು.



ಅವರು, ಶನಿವಾರ ತಾಲ್ಲೂಕು ಪಂಚಾಯಿತಿ ಕಾರ್ಯಾಲಯದಲ್ಲಿ ವಿವಿಧ ಇಲಾಖೆಗಳ ಪ್ರಗತಿಪರಿಶೀಲನಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು. ಸರ್ಕಾರದ ಯೋಜನೆಗಳ ಅನುಷ್ಠಾನ ಹಾಗೂ ಸಾರ್ವಜನಿಕರೊಂದಿಗೆ ಉತ್ತಮ ಸಂಪರ್ಕವನ್ನಿಟ್ಟುಕೊಂಡುಕೆಲಸನಿರ್ವಹಿಸಿ, ಸುಳ್ಳು ಹೇಳುವುದು ಕೆಲಸದಲ್ಲಿ ನಿರ್ಲಕ್ಷ್ಯ ತೋರುವುದುಒಳ್ಳೆಯಲಕ್ಷಣವಲ್ಲವೆಂದರು. ಇಲಾಖೆಯ ಪ್ರತಿಯೊಬ್ಬ ಅಧಿಕಾರಿ ಹಾಗೂ ಸಿಬ್ಬಂದಿ ಕಾರ್ಯದಕ್ಷತೆಯ ಬಗ್ಗೆ ನಿರಂತರ ಪರಿಶೀಲನೆ ನಡೆಸಲಾಗುತ್ತದೆ. ಲೋಪಕಂಡುಬಂದಲ್ಲಿ ಮಾತ್ರ ಅಂತಹವರ ವಿರುದ್ದ ನಿದ್ರಾಕ್ಷಣ್ಯವಾಗಿ ಕ್ರಮ ಕೈಗೊಳ್ಳಲಾಗುವುದು ಎಂದರು.

ಸರ್ಕಾರ ಎಲ್ಲಾ ರೀತಿಯ ಸೌಲಭ್ಯ ನೀಡಿದರೂ ಕೆಲ ಅಧಿಕಾರಿಗಳು ಕಚೇರಿಯಲ್ಲಿ ಕುಳಿತು ಕಾಲಹರಣ ಮಾಡುವ ಬಗ್ಗೆ ಮಾಹಿತಿ ಬಂದಿದೆ. ಮುಂದಿನ ದಿನಗಳಲ್ಲಿ ಕಡ್ಡಾಯವಾಗಿ ಅಧಿಕಾರಿಗಳು ಬದಲಾಯಿಸಿಕೊಳ್ಳಬೇಕು ಎಂದು ಎಚ್ಚರಿಕೆ ನೀಡಿದರು. ಚಳ್ಳಕೆರೆ ತಾಲ್ಲೂಕು ಶೇಂಗಾ ಬೆಳೆಗೆ ಹೆಸರು ಮಾಡಿದ್ದು, ಕೃಷಿ ಅಧಿಕಾರಿಗಳು ಈ ಬಗ್ಗೆ ಸೂಕ್ತ ಮಾರ್ಗದರ್ಶನ ನೀಡಬೇಕಲ್ಲದೆ, ಶೇಂಗಾದಿಂದ ತಯಾರಾಗುವ ಉತ್ಪನ್ನಗಳ ಬಗ್ಗೆ ತಿಳಿಸಬೇಕು ಎಂದರು. ತೋಟಗಾರಿಕೆ ಅಧಿಕಾರಿಗೆ ಕಡಿಮೆ ನೀರು ಉಪಯೋಗಿಸಿ ಹೆಚ್ಚು ಉಪಯುಕ್ತ ಬೆಳೆಗಳ ಬಗ್ಗೆ ರೈತರಿಗೆ ಮಾಹಿತಿ ನೀಡಿ ಎಂದರು. ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ ಅಧಿಕಾರಿ ದಯಾನಂದಗೆ ಶಾಲಾ, ಕಾಲೇಜು ಅಂಗನವಾಡಿ ಕೇಂದ್ರಗಳ ಮಕ್ಕಳಿಗೆ ಜಲಜೀವನ್‌ಮೀಷನ್ ಯೋಜನೆಯಡಿ ಕುಡಿಯುವ ನೀರಿನ ಸಂಪರ್ಕ ಕಲ್ಪಿಸುವಂತೆ ಸೂಚಿಸಿದರು. ಪೌರಾಯುಕ್ತ ಜಗರೆಡ್ಡಿಗೆ ನಗರಸಭೆಯ ಅನುದಾನವನ್ನು ಕಾಮಗಾರಿಗೆ ಹೆಚ್ಚು ಉಪಯೋಗಿಸದೆ ವಿದ್ಯಾರ್ಥಿಗಳ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಉಪಯೋಗವಾಗುವಂತೆ ಬಳಕೆ ಮಾಡಿ ಎಂದರು. ಬಿಇಒ ಕೆ.ಎಸ್.ಸುರೇಶ್‌ಗೆ ಸೂಚಿಸಿದ ಅವರು, ಎಸ್‌ಎಸ್‌ಎಲ್‌ಸಿಯಲ್ಲಿ ಶೇ.100ರ ಫಲಿತಾಂಶ ದಾಖಲಿಸಲು ತಾಲ್ಲೂಕು ಮಟ್ಟದ ಶಿಕ್ಷಣ ಇಲಾಖೆಯ ಹಿರಿಯ ಶಿಕ್ಷಕರನ್ನು ನೋಡಲ್ ಅಧಿಕಾರಿಯಾಗಿ ಸೂಚಿಸುವಂತೆ ತಿಳಿಸಿದರು.

ತಹಶೀಲ್ದಾರ್ ರೇಹಾನ್‌ಪಾಷ, ಜಿಲ್ಲಾ ಬಿಸಿಎಂ ಅಧಿಕಾರಿ ದಿವಾಕರ, ಸಹಾಯಕ ನಿರ್ದೇಶಕ ಸಂಪತ್ತು, ಸಂತೋಷ್ ಹಾಗೂ ತಾಲ್ಲೂಕು ಮಟ್ಟದ ಅಧಿಕಾರಿಗಳು ಇದ್ದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T